ಸಂಪುಟ : 9 ಸಂಚಿಕೆ 205 ಪುಟ : 4 ಬೆಲೆ: 3.00 ರವಿವಾರ ಸೆಪ್ಟೆಂಬರ್ 22 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 205 Pages : 4 Price : 3.00 Sunday september 22 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಲಕ್ಷ್ಮೇಶ್ವರ ಹಾಗೂ 110 ಕೆವ್ಹಿ ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಸೆ. 24ರ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಲಕ್ಷ್ಮೇಶ್ವರ ಹಾಗೂ 110 ಕೆವ್ಹಿ ಬೆಳ್ಳಟ್ಟಿ ಉಪಕೇಂದ್ರಗಳಿಂದ ಪೂರೈಕೆಯಾಗುವ 110 ಕೆವ್ಹಿ ಬೆಳ್ಳಟ್ಟಿ-ಬಾಗೇವಾಡಿ ವಿದ್ಯುತ್ ಮಾರ್ಗ, 33 ಕೆವ್ಹಿ ಎಮ್.ಎಮ್.ಸಿ.ಎಲ್ ಗಾಳಿಯಂತ್ರ ಘಟಕ ಮತ್ತು 33 ಕೆವ್ಹಿ ಸೋಮೆಶ್ವರ ಸ್ಪಿನ್ನಿಂಗ್ ಮಿಲ್, ಸೋಲಾರ್-1, ಸೋಲಾರ್-2 ಹಾಗೂ 110 ಕೆವ್ಹಿ ಎನಾರಕಾನ, 110 ಕೆವ್ಹಿ ಆದಿತ್ಯ ಬಿರ್ಲಾ ಸೋಲಾರ, 33 ಕೆವ್ಹಿ ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆವ್ಹಿ ಸೂರಣಗಿ ಉಪಕೇಂದ್ರ ಮತ್ತು 33 ಕೆವ್ಹಿ ಹೊಳೆಇಟಗಿ ಉಪಕೇಂದ್ರಗಳಿಂದ ಪೂರೈಸ್ಪಡುವ ಎಲ್ಲಾ ನಗರ, ಕೈಗಾರಿಕಾ, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ತಿಳಿಸಿದೆ.

## ಸೆ.28ರಂದು ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳು ಗದಗ ಜಿಲ್ಲೆಯಲ್ಲಿ ಸೆಪ್ಟೆಂಬರ್ 28ರಂದು ಬೆಳಿಗ್ಗೆ 09-00 ಗಂಟೆಗೆ ಮಹಾತ್ಮಾಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಹಾಕಿ ಪಂದ್ಯಾವಳಿ, ಕಳಸಾಪೂರ ರಸ್ತೆಯ ಒಳಾಂಗಣ ಕ್ರೀಡಾಂಗಣದಲ್ಲಿ ಕಬಡ್ಡಿ ಪಂದ್ಯಾವಳಿ ಹಾಗೂ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಫುಟ್ಬಾಲ್ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ. ಬೆಳಗಾವಿ ವಿಭಾಗದಲ್ಲಿ ಬರುವ 07 ಜಿಲ್ಲೆಗಳಲ್ಲಿ ಪ್ರಥಮ ಸ್ಥಾನ ಗಳಿಸಿದ ಪುರುಷ ಮತ್ತು ಮಹಿಳಾ (ಫುಟ್ಬಾಲ್ ಹೊರತು ಪಡಿಸಿ) ಮಹಿಳಾ ಕ್ರೀಡಾಪಟುಗಳು ಸರಿಯಾದ ಸಮಯಕ್ಕೆ ಹಾಜರಾಗಬೇಕೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ: ಶರಣು ಗೋಗೇರಿ ತಿಳಿಸಿದ್ದಾರೆ.

ಧಾರವಾಡ ಜಿಲ್ಲೆಯಲ್ಲಿ ಅಥ್ಲೆಟಿಕ್ಸ್, ಬ್ಯಾಡ್ಮಿಂಟನ್, ಟೇಬಲ್ ಟೆನ್ನಿಸ್, ಟೆನ್ನಿಸ್, ಜಿಮ್ನಾಸ್ಟಿಕ್ಸ್, ಟೇಕ್ವಾಂಡೋ, ಕ್ರೀಡೆಗಳು, ಬೆಳಗಾವಿ ಜಿಲ್ಲೆಯಲ್ಲಿ ವ್ಹಾಲಿಬಾಲ್, ಬಾಸ್ಕೆಟ್ ಬಾಲ್, ಕುಸ್ತಿ, ಜೂಡೋ, ಈಜು, ಬಾಕ್ಸಿಂಗ್, ಭಾರ ಎತ್ತುವ ಕ್ರೀಡೆಗಳು, ಉತ್ತರ ಕನ್ನಡ ಜಿಲ್ಲೆಯಲ್ಲಿ ಖೋಖೋ, ಥ್ರೋಬಾಲ್, ಕ್ರೀಡೆಗಳು, ಹಾವೇರಿ ಜಿಲ್ಲೆಯಲ್ಲಿ ಹ್ಯಾಂಡ್ ಬಾಲ್ ಮತ್ತು ಬಾಲ್ ಬ್ಯಾಡ್ಮಿಂಟನ್ ಕ್ರೀಡೆಗಳು, ಬಾಗಲಕೋಟೆ ಜಿಲ್ಲೆಯಲ್ಲಿ ವುಶೂ, ನೆಟ್ಬಾಲ್, ಮತ್ತು ಯೋಗ ಸ್ಪರ್ಧೆಗಳು ಜರುಗಲಿದ್ದು, ಗದಗ ಜಿಲ್ಲೆಯ ಅಥ್ಲೆಟಿಕ್ಸ್ ನಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಹಾಗೂ ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳು ಆಯಾ ಜಿಲ್ಲೆಯವರು ನಿಗದಿಪಡಿಸಿದ ದಿನಾಂಕ, ಸ್ಥಳ ಹಾಗೂ ಸಮಯಕ್ಕೆ ಹಾಜರಾಗಿ ಪಾಲ್ಗೊಳ್ಳಲು ತಿಳಿಸಲಾಗಿದೆ.

ಅರ್ಚರಿ ಮತ್ತು ಫೆನ್ಸಿಂಗ್ ಕ್ರೀಡೆಗಳ ವಿಭಾಗ ಮಟ್ಟದ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಎಲ್ಲಾ 05 ವಿಭಾಗಗಳ ಆಯ್ಕೆಯನ್ನು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರ, ನಗರ ಜಿಲ್ಲೆ, ಇವರು ಬೆಂಗಳೂರು ನಗರದಲ್ಲಿ ಆಯೋಜಿಸುತ್ತಾರೆ. ಸಂಬಂಧಿಸಿದವರು ಸಂಪರ್ಕಿಸಿ ಭಾಗವಹಿಸುವುದು.

ಸ್ಕೈಕ್ಲಿಂಗ್ ಕ್ರೀಡೆಗೆ ಸಂಬಂಧಿಸಿದಂತೆ ಪ್ರತಿ ಜಿಲ್ಲೆಯಿಂದ ರಾಜ್ಯ ಮಟ್ಟಕ್ಕೆ ನೇರವಾಗಿ ಗರಿಷ್ಠ 10 ಕ್ರೀಡಾಪಟುಗಳನ್ನು (ಪುರುಷರು ಮತ್ತು ಮಹಿಳೆಯರು ಸೇರಿ) ತರಬೇತುದಾರರು ಮತ್ತು ವ್ಯವಸ್ಥಾಪಕರೊಂದಿಗೆ ನಿಯೋಜಿಸುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ ದೂರವಾಣಿ ಸಂಖ್ಯೆ 08372-238345ಗೆ ಹಾಗೂ ಸುರೇಶ ವ್ಹಿ. ಸಂಗಮದ ದೂರವಾಣಿ ಸಂಖ್ಯೆ :9060703554 ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

### 20 ಕೋಟಿ ರೂ ವೆಚ್ಚದ ದ್ವಿಪಥ ರಸ್ತೆಗೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಉದ್ಯಾನ ನಿರ್ಮಾಣಕ್ಕೆ ಕ್ರಿಯಾಯೋಜನೆ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಜಿಗಳೂರ ಕೆರೆಯ ತಟದಲ್ಲಿ ವರ್ಣರಂಜಿತ ಉದ್ಯಾನವನ್ನು ನಿರ್ಮಿಸುವ ಮೂಲಕ ಪ್ರವಾಸಿ ತಾಣವನ್ನಾಗಿ ಮಾರ್ಪಡಿಸಲಾಗುವುದು ಎಂದು ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ರೋಣ ಪಟ್ಟಣದಲ್ಲಿ 20 ಕೋಟಿ ರೂಗಳ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ದ್ವಿಪಥ ಸಿಸಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆಯನ್ನು ನೆರವೇರಿಸಿ ಮಾತನಾಡಿದರು.

ರೋಣ ಪಟ್ಟಣ ಸೇರಿದಂತೆ ತಾಲೂಕಿನಲ್ಲಿ ಅತಿ ಹೆಚ್ಚು ರೈತರಿದ್ದಾರೆ. ಹೀಗಾಗಿ ದವಸ ಧಾನ್ಯಗಳನ್ನು ಸಂಗ್ರಹ ಮಾಡಲು ಅನೇಕ ಗೋದಾಮುಗಳನ್ನು ನಿರ್ಮಿಸಿ ಅನುಕೂಲ ಕಲ್ಪಿಸಲಾಗಿದ್ದು, ಈಗ ಪಟ್ಟಣದ ಸೌಂದರ್ಯಕ್ಕೆ ಹೆಚ್ಚಿನ ಒತ್ತನ್ನು ನೀಡಲಾಗುತ್ತಿದೆ. 2 ಕಿಮಿಗೂ ಹೆಚ್ಚು ದೂರ ದ್ವಿಪಥ ಸಿಸಿ ರಸ್ತೆ, ಚರಂಡಿ, ಸಂಚಾರಿಗಳಿಗೆ ಪ್ರತ್ಯೇಕ ರಸ್ತೆಯನ್ನು




ನಿರ್ಮಿಸಲು ತೀರ್ಮಾನಿಸಲಾಗಿದೆ ಎಂದರು.

ಜಿಗಳೂರ ಕೆರೆಯನ್ನು ಉತ್ತಮವಾಗಿ ಅಭಿವೃದ್ಧಿಪಡಿಸಲಾಗಿದ್ದು, ಈ ಸ್ಥಳದಲ್ಲಿ ವರ್ಣರಂಜಿತ ಉದ್ಯಾನವನ್ನು ನಿರ್ಮಿಸಲು ಈಗಾಗಲೇ ಕ್ರಿಯಾಯೋಜನೆಯನ್ನು ರೂಪಿಸಲಾಗಿದೆ. ಇನ್ನು ಕೆಲ ದಿನಗಳಲ್ಲಿ ಉದ್ಯಾನವನ ನಿರ್ಮಾಣಕ್ಕೆ ಚಾಲನೆ ನೀಡಲಾಗುತ್ತಿದ್ದು, ನಾಗರಿಕ ಸಮುದಾಯಕ್ಕೆ ಅದೊಂದು ಪ್ರವಾಸಿ ತಾಣವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಈಗಾಗಲೇ ಜೆಟಿಟಿಸಿ ಮಹಾವಿದ್ಯಾಲಯ ಆರಂಭಗೊಂಡಿದ್ದು, 3 ಎಕರೆ ಜಮೀನಿನಲ್ಲಿ 50 ಕೋಟಿ ರೂಗಳ ವೆಚ್ಚದಲ್ಲಿ ಮಹಾವಿದ್ಯಾಲಯದ ಕಟ್ಟಡ ನಿರ್ಮಾಣವಾಗಲಿದೆ. ಅಲ್ಲದೆ ರೋಣ ಸರಕಾರಿ ಆಸ್ಪತ್ರೆಗೆ ಗುಣಮಟ್ಟದ ಸಲಕರಣೆಗಳನ್ನು ಒದಗಿಸಲು 50 ಲಕ್ಷ ರೂಗಳ ಅನುದಾನವನ್ನು ಸಹ ತರಲಾಗಿದೆ. ಅಲ್ಪಸಂಖ್ಯಾತ ಮಕ್ಕಳ ಶಿಕ್ಷಣಕ್ಕಾಗಿ ಪಿಯುಸಿ ಕಾಲೇಜು ಹಾಗೂ ವಸತಿ ನಿಲಯ ಮಂಜೂರಾಗಿದ್ದಲ್ಲದೆ, ಬಿಸಿಎಂ ಇಲಾಖೆಗೂ ಸಹ ಎರಡು ವಸತಿ ನಿಲಯಗಳು ಮಂಜೂರಾಗಿವೆ. ಕುರಹಟ್ಟಿ ರಸ್ತೆ ಅಭಿವೃದ್ಧಿಗೆ 3 ಕೋಟಿ ರೂ ನೀಡಲಾಗಿದೆ ಎಂದರು.

ಪುರಸಭೆಯ ಅಧ್ಯಕ್ಷೆ ಗೀತಾ ಮಾಡಲಗೇರಿ ಅಧ್ಯಕ್ಷತೆ ವಹಿಸಿದ್ದರು. ಪುರಸಭೆಯ ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ, ವಿ.ಆರ್. ಗುಡಿಸಾಗರ, ಬಸವರಾಜ ನವಲಗುಂದ, ಪರಶುರಾಮ ಅಳಗವಾಡಿ, ವಿದ್ಯಾ ದೊಡ್ಡಮನಿ, ವಿ.ಎಂ. ಪಾಟೀಲ, ಭೀಮಣ್ಣ ನಾಯ್ಕ, ಬಾವಾಸಾಬ ಬಟಗೇರಿ, ವಿ.ಬಿ. ಸೋಮನಕಟ್ಟಿಮಠ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಎಸ್.ಎಚ್. ಶಿವನಗೌಡರ ಮಾಹಿತಿ

## ಹಿಂದೂ ಮಹಾಗಣಪತಿ ಧರ್ಮಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

3ನೇ ವರ್ಷದ ಗಣಪತಿ ಪ್ರತಿಷ್ಠಾಪನೆಯ ಅಂಗವಾಗಿ ಸೆ. 22ರಂದು ಸಂಜೆ 6 ಗಂಟೆಗೆ ಧರ್ಮಸಭೆ, ನೃತ್ಯ, ಸಂಗೀತ ವೈಭವ ಹಾಗೂ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಹಿಂದೂ ಮಹಾಗಣಪತಿ ಗದಗ ಜಿಲ್ಲೆಯ ಗೌರವಾಧ್ಯಕ್ಷ ಎಸ್.ಎಚ್. ಶಿವನಗೌಡರ ಹೇಳಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಸುದರ್ಶನ ಚಕ್ರ ಯುವ ಮಂಡಳ ಆಶ್ರಯದಲ್ಲಿ ಕಾರ್ಯಕ್ರಮ ನಡೆಯಲಿದೆ. ಕಾಟನ್ ಮಾರ್ಕೆಟ್ ರಸ್ತೆಯಲ್ಲಿನ ಬೃಹತ್ ವೇದಿಕೆಯಲ್ಲಿ ರಾಜ್ಯ ಹಾಗೂ ರಾಷ್ಟ್ರ ಪ್ರಶಸ್ತಿ ವಿಜೇತ ಮಂಗಳೂರಿನ ಹೆಜ್ಜೆನಾದ ತಂಡದಿಂದ ನೃತ್ಯ ಮತ್ತು ಸಂಗೀತ ವೈಭವ ಕಾರ್ಯಕ್ರಮ ನಡೆಯಲಿದೆ. ಮಣಕವಾಡದ ಅಭಿನವ





ಮೃತ್ಯುಂಜಯ ಸ್ವಾಮಿಗಳು ಕಾರ್ಯಕ್ರಮದ ಸಾನ್ನಿಧ್ಯ ವಹಿಸುವರು. ವಿ.ಪ ಸದಸ್ಯ ಎಸ್.ವಿ. ಸಂಕನೂರ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಗಣ್ಯರು, ದಾನಿಗಳನ್ನು ಸನ್ಮಾನಿಸಲಾಗುವುದು ಎಂದರು.

ಹಿಂದೂ ಮಹಾಗಣಪತಿ ಗದಗ ಜಿಲ್ಲೆ ಅಧ್ಯಕ್ಷ ಸುಧೀರ್ ಕಾಟಿಗಾರ ಮಾತನಾಡಿ, ಗಣೇಶೋತ್ಸವದ ಅಂಗವಾಗಿ ಮಹಿಳೆಯರಿಗೆ, ಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಣೆ ಮಾಡಲಾಗುವುದು. ಸೆ.24ರಂದು ಲಯನ್ಸ್ ಕ್ಲಬ್ ಸಹಯೋಗದಲ್ಲಿ ಹುಬ್ಬಳ್ಳಿ ಜನಪ್ರಿಯಾ ಆಸ್ಪತ್ರೆ ವೈದ್ಯರಿಂದ ಉಚಿತವಾಗಿ ಕಣ್ಣಿನ ತಪಾಸಣೆ, ಸೆ.25ರಂದು ಬೆಳಗ್ಗೆ 9 ಗಂಟೆಗೆ ಸತ್ಯನಾರಾಯಣ ಪೂಜೆ ಹಾಗೂ ಸೆ. 27ರಂದು ಸಕಲ ಮಂಗಲ ವಾದ್ಯಮೇಳದೊಂದಿಗೆ ಮೂರ್ತಿ ವಿಸರ್ಜನಾ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ರಾಘು ಹಬೀಬ, ಅಶ್ವಿನಿ ಜಗತಾಪ, ವಂದನಾ ವರ್ಣೇಕರ, ಮಂಜುನಾಥ ಖೋಡೆ, ರಮೇಶ ಸಜ್ಜಗಾರ ಇತರರು ಉಪಸ್ಥಿತರಿದ್ದರು.

## ಶ್ರೀ ಗುರು ಪುಟ್ಟರಾಜರ ಪುಣ್ಯಸ್ಮರಣೆಯ ಕವಿಗೋಷ್ಠಿ

■ವಿಜಯಸಾಕ್ಷಿ ಸುದ್ದಿ, ಗದಗ



ಅಶ್ವಿನಿ ಪ್ರಕಾಶನ ಹಾಗೂ ಡಾ. ವಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನ ಗದಗ ವತಿಯಿಂದ ನಡೆದಾಡುವ ದೇವರು ಶ್ರೀ ಗುರು ಪುಟ್ಟರಾಜ ಗವಾಯಿಗಳವರ 14ನೇ ಪುಣ್ಯಸ್ಮರಣೆಯ ನಿಮಿತ್ತ ಮಹಾಮನೆಯ ಅಂಗಳದಲ್ಲಿ ಸೆ.22ರಂದು ಕವಿಗೋಷ್ಠಿಯನ್ನು ಅಶ್ವಿನಿ ಪ್ರಕಾಶನದ ಡಾ. ವಿ.ವಿ. ಹಿರೇಮಠರ ನಿವಾಸದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಜಗದ್ಗುರು ಅನ್ನದಾನೇಶ್ವರ ಸಂಸ್ಥಾನಮಠದ ಡಾ. ಪರಮಪೂಜ್ಯ ವಿರೇಶ್ವರ ಶಿವಯೋಗಿಗಳು ವಹಿಸುವರು. ಉದ್ಘಾಟಕರಾಗಿ ಲಕ್ಕುಂಡಿ ಪರಂಪರೆ ಪ್ರಾದೇಶಿಕ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ ಆಗಮಿಸಲಿದ್ದು, ಅಧ್ಯಕ್ಷತೆಯನ್ನು ಡಾ. ವಿ.ವಿ. ಹಿರೇಮಠ ವಹಿಸಿಕೊಳ್ಳುವರು. ಕವಿಗೋಷ್ಠಿಯ ಅಧ್ಯಕ್ಷತೆಯನ್ನು ಈರಣ್ಣ ಮಾದರ್ ವಹಿಸುವರು. ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಕಲಕ ಮಲ್ಲೇಶ್ ಚನ್ನಬಸಪ್ಪ ಪಟ್ಟಣಶೆಟ್ಟಿ ಹಾಗೂ ರತ್ನಾ ಬದಿಯವರನ್ನು ಸನ್ಮಾನಿಸಲಾಗುವುದು. ಮಾಹಾಮನೆಯ ಅಂಗಳದ ಕವಿಗೋಷ್ಠಿಯಲ್ಲಿ ಶ್ರೀ ಗುರು ಪುಟ್ಟರಾಜರ 14ನೇ ಪುಣ್ಯಸ್ಮರನೆಯಲ್ಲಿ ವಿಶೇಷವಾಗಿ ಪುಟ್ಟರಾಜಗಳ ಬಗ್ಗೆ ಕವನ ರಚಿಸಿ ಕವನ ವಾಚನ ಮಾಡಲು ಕನ್ನಡ ಮನಸ್ಸುಗಳು, ಕವಿಗಳು ತಮ್ಮ ರಚನೆಯ ಮೂಲಕ ನಮನಗಳನ್ನು ಸಲ್ಲಿಸುವರು ಎಂದು ಆಯೋಜಿಕರಾದ ಅಶ್ವಿನಿ ಪ್ರಕಾಶನದ ಕಾರ್ಯದರ್ಶಿ ಪುಟ್ಟರಾಜಸ್ವಾಮಿ ಹಿರೇಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನವೀಕೃತಗೊಂಡ ಉತ್ತರ ಸಿಆರ್‌ಸಿ ಕೇಂದ್ರ ಉದ್ಘಾಟಿಸಿದ ಶಾಸಕ ಚಂದ್ರು ಲಮಾಣಿ

# ಸಂಪನ್ಮೂಲ ಕೇಂದ್ರಗಳ ಪಾತ್ರ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಇಲಾಖೆಯಲ್ಲಿ ಸಂಪನ್ಮೂಲ ಕೇಂದ್ರಗಳು ಹೆಚ್ಚು ಮಹತ್ವವನ್ನು ಪಡೆದುಕೊಳ್ಳುತ್ತಿವೆ. ಶೈಕ್ಷಣಿಕ ಗುಣಮಟ್ಟ ಸುಧಾರಣೆ, ಶಿಕ್ಷಕರ ಜ್ಞಾನ ಹೆಚ್ಚಳ, ಇಲಾಖೆ ಕಾರ್ಯಕ್ರಮಗಳಾದ ಸಮಾಲೋಚನೆ, ಶಿಕ್ಷಕರ ತರಬೇತಿ ಮತ್ತಿತರ ಮಹತ್ವದ ಉದ್ದೇಶ ಸಾಧನೆಯಲ್ಲಿ ಸಮೂಹ ಸಂಪನ್ಮೂಲ ಕೇಂದ್ರಗಳ ಪಾತ್ರ ಮಹತ್ವದ್ದಾಗಿದ್ದು, ಇದು ಎಲ್ಲರಿಗೂ ಸದುಪಯೋಗವಾಗಲಿ ಎಂದು ಶಾಸಕ ಡಾ.ಚಂದ್ರು ಲಮಾಣಿ ಅಭಿಮತ ವ್ಯಕ್ತಪಡಿಸಿದರು.

ಅವರು ಪಟ್ಟಣದ ನಂ 01 ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ನವೀಕೃತಗೊಂಡ ಉತ್ತರ ಸಿಆರ್‌ಸಿ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಮಾತನಾಡಿ, ಶಿಕ್ಷಣ ಇಲಾಖೆಯು ಪ್ರತಿ ಕ್ಲಸ್ಟರ್‌ಗೆ ಒಂದು ಸಮೂಹ ಸಂಪನ್ಮೂಲ ಕೇಂದ್ರ ಸ್ಥಾಪಿಸಿದೆ ಹಾಗೂ ಇವು ಶಿಕ್ಷಕರ ತರಗತಿ ಪ್ರಕ್ರಿಯೆಯ ಸವಾಲುಗಳನ್ನು ಎದುರಿಸಲು, ತರಗತಿ ಪ್ರಕ್ರಿಯೆಯ



ನಾವೀನ್ಯತೆ ಕಲಿಯುವ ಸ್ಥಳವಾಗಿದೆ ಎಂದು ಹೇಳಿದರು.

ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಚ್. ನಾಣಕೀ ನಾಯಕ ಮಾತನಾಡಿ, ಕ್ಲಸ್ಟರ್ ಸಂಪನ್ಮೂಲ ಕೇಂದ್ರವನ್ನು ಇಲ್ಲಿನ ಸಂಪನ್ಮೂಲ ವ್ಯಕ್ತಿ ಉಮೇಶ ನೇಕಾರ ಅವರು ಎಲ್ಲಾ ಶಿಕ್ಷಕರ ಸಹಕಾರದಿಂದ ಹಾಗೂ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳು ಮತ್ತು ಸಾರ್ವಜನಿಕರ ಆರ್ಥಿಕ ನೆರವಿನಿಂದಾಗಿ ಪುನಶ್ಚೇತನಗೊಳಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಸಭೆಯಲ್ಲಿ ಬಿ.ಎಸ್. ಹರಲಾಪುರ, ಚಂದ್ರಕಾಂತ ನೇಕಾರ, ಗೀತಾ ಹಳ್ಯಾಳ, ಎಲ್.ಎನ್. ನಂದೆಣ್ಣವರ, ಎಮ್.ಎಮ್. ಹವಳದ, ಪುರಸಭೆ ಸದಸ್ಯೆ ಪೂರ್ಣಿಮಾ ಪಾಟೀಲ, ಎಮ್.ಆರ್. ಪಾಟೀಲ, ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಗೋಡಿ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕರಾದ ಎಚ್.ಎಸ್. ರಾಮನಗೌಡ್ರ, ಎಮ್.ಬಿ. ಹೊಸಮನಿ, ಆನಂದ ಮುಳಗುಂದ, ಎಸ್.ಡಿ. ಲಮಾಣಿ, ಎಚ್.ಎಮ್. ಗುತ್ತಲ, ಎಫ್.ಎಸ್. ತಳವಾರ, ಪ್ರಧಾನ ಗುರುಗಳಾದ ಡಿ.ಎನ್. ದೊಡ್ಡಮನಿ, ಹರೀಶ್ ಎಸ್, ಉಮೇಶ್ ಹುಚ್ಚಯ್ಯಮಠ, ಬಿ.ಎಮ್. ಯರಗುಪ್ಪಿ, ಬಿ.ಎಮ್. ಕುಂಬಾರ, ಪೂರ್ಣಾಜಿ ಕರಾಟೆ, ಸತೀಶ ಬೋಮಲೆ, ಗಿರೀಶ ನೇಕಾರ, ಉಮೇಶ ನೇಕಾರ, ಜ್ಯೋತಿ ಗಾಯಕವಾಡ ಸೇರಿದಂತೆ ತಾಲೂಕಿನ ಎಲ್ಲಾ ಇಸಿಓ, ಬಿಆರ್‌ಪಿ, ಸಿಆರ್‌ಪಿ ಮತ್ತು ಎಲ್ಲಾ ಶೈಕ್ಷಣಿಕ ಸಂಘಗಳ ಪದಾಧಿಕಾರಿಗಳು, ಲಕ್ಷ್ಮೇಶ್ವರ ಉತ್ತರ ಕ್ಲಸ್ಟರ್‌ನ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು ಉಪಸ್ಥಿತರಿದ್ದರು.

ಉಮೇಶ ನೇಕಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಜೇಶ್ವರಿ ಅಡರಕಟ್ಟಿ, ಎಸ್.ಎಸ್. ಮುಳಗುಂದ ನಿರೂಪಿಸಿದರು. ಸತೀಶ್ ಬೋಮಲೆ ವಂದಿಸಿದರು.

## ನರೇಗಾ ಕಾಮಗಾರಿಗಳ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಮಾಗಡಿ ಗ್ರಾ.ಪಂ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಮತ್ತು ಪ್ರಗತಿಯಲ್ಲಿರುವ ನರೇಗಾ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಪರಿಶೀಲಿಸಿದರು.

ನಂತರ ಆರ್‌ಡಿಪಿಆರ್ ಇಲಾಖೆ ವತಿಯಿಂದ ನಡೆಯುತ್ತಿರುವ ಗ್ರಂಥಾಲಯಕ್ಕೆ ಭೇಟಿ ನೀಡಿ, ಪುಸ್ತಕಗಳ ಸಂಖ್ಯೆ ಮತ್ತು ಓದುಗರ ಸಂಖ್ಯೆಯನ್ನು ಪಡೆದುಕೊಂಡು ಓದುಗರಿಗೆ ಮುಕ್ತ ಅವಕಾಶವನ್ನು ಕಲ್ಪಿಸಿಕೊಡುವಂತೆ ಸಿಬ್ಬಂದಿಗಳಿಗೆ ಸೂಚನೆಯನ್ನು ನೀಡಿದರು. ಮಾಗಡಿ ಗ್ರಾಮದ ಅಂಗನವಾಡಿ ಕೇಂದ್ರಕ್ಕೂ ತೆರಳಿ ಮಕ್ಕಳಿಗೆ ನೀಡುವಂತಹ ಪೌಷ್ಠಿಕ ಆಹಾರದ ಪರಿಶೀಲನೆ ನಡೆಸಿ ಮಕ್ಕಳಿಗೆ ಸರಕಾರ ಕೊಡಮಾಡುವ ಎಲ್ಲ



ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸುವಂತೆ ಅಂಗನವಾಡಿ ಕಾರ್ಯಕರ್ತೆಯರಿಗೆ ಸೂಚಿಸಿದರು.

ತೆರಿಗೆ ವಸೂಲಿಯನ್ನು ಒತ್ತಾಯಪೂರ್ವಕವಾಗಿ ಮಾಡದೇ ಸ್ನೇಹಪೂರ್ವಕವಾಗಿ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಮನೆ ಮನೆಗೆ ತೆರಳಿ ತೆರಿಗೆ ವಸೂಲಿಯನ್ನು ಹೆಚ್ಚಿಸಬೇಕೆಂದು ಸೂಚನೆಯನ್ನು ನೀಡಿದರು.

ಇತ್ತೀಚೆಗೆ ಶಿರಹಟ್ಟಿ ತಾಲೂಕಿನಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಧಾವಿಸಿ ಸಭೆಗಳನ್ನು ನಡೆಸುತ್ತಿದ್ದಾರೆ. ವಿವಿಧ ಸ್ಥಳಗಳಲ್ಲಿ ಕಾಮಗಾರಿಗಳ ವೀಕ್ಷಣೆಗೂ ಆಗಮಿಸುತ್ತಿದ್ದಾರೆ. ಆದರೆ, ಸ್ಥಳೀಯ ತಾಲೂಕಾ ಮಟ್ಟದ ಅಧಿಕಾರಿಗಳು ಜಿಲ್ಲಾ ಮಟ್ಟದ ಅಧಿಕಾರಿಗಳು ಆಗಮಿಸುವ ಬಗ್ಗೆ ಯಾವುದೇ ಮಾಹಿತಿ ನೀಡದೇ ಇರುವುದು ಸಾರ್ವಜನಿಕ ವಲಯದಲ್ಲಿ ಸಂಶಯಕ್ಕೆ ಎಡೆ ಮಾಡಿಕೊಡುತ್ತಿದೆ. ಈ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳೇ ಸ್ಥಳೀಯ ತಾಲೂಕಾ ಮಟ್ಟದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸಾಹಿತ್ಯ ಅಕಾಡೆಮಿಯು ಕರ್ನಾಟಕ ಜಾನಪದ ವಿಶ್ವ ವಿದ್ಯಾಲಯ ಗೊಟಗೋಡಿ, ಹಾವೇರಿ ಜಿಲ್ಲೆ ಇವರ ಸಹಯೋಗದಲ್ಲಿ ಗಿರಿಜನ ಉಪಯೋಜನೆಯಡಿ ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳು ಎಂಬ ಹೆಸರಿನಲ್ಲಿ 3 ದಿನಗಳ ಕಮ್ಮಟವನ್ನು ಅಕ್ಟೋಬರ್ ಕೊನೆಯ ವಾರದಲ್ಲಿ ಹಾವೇರಿ ಜಿಲ್ಲೆಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿಯಲ್ಲಿ ನಡೆಸಲಾಗುತ್ತಿದ್ದು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯಿರುವ 20 ರಿಂದ 45 ವರ್ಷ ವಯಸ್ಸುಳ್ಳ ಪರಿಶಿಷ್ಟ ಪಂಗಡಕ್ಕೆ ಸೇರಿದ ರಾಜ್ಯದ ಎಲ್ಲ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಅಕ್ಟೋಬರ್ 8 ಕೊನೆಯ ದಿನವಾಗಿದ್ದು, ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್ ಸೈಟ್ http;//karnatakasahithyaacademy.org ಯಿಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ.

## ಸಂಪಾದಕೀಯ

# ಧಾರ್ಮಿಕ ಭಾವನೆಗೆ ಧಕ್ಕೆ ಆಗದಿರಲಿ

ತಿರುಪತಿ ತಿಮ್ಮಪ್ಪನ ಲಡ್ಡು ಪ್ರಸಾದಕ್ಕೆ ಬಳಕೆಯಾದ ತುಪ್ಪದಲ್ಲಿ ಪ್ರಾಣಿಗಳ ಕೊಬ್ಬಿನಾಂಶ ಇರುವ ಸಂಗತಿ ಈಗ ದೇಶಾದ್ಯಂತ ಸಂಚಲನ ಸೃಷ್ಟಿಸಿದೆ. ದೇಶಾದ್ಯಂತ ಕೋಟ್ಯಾಂತರ ಸಂಖ್ಯೆಯಲ್ಲಿರುವ ತಿರುಪತಿ ತಿಮ್ಮಪ್ಪನ ಅಪಾರ ಭಕ್ತರ ಧಾರ್ಮಿಕ ಭಾವನೆಗೆ ಘಾಸಿ ಉಂಟು ಮಾಡಿದೆ. ತಿರುಪತಿ ತಿಮ್ಮಪ್ಪನ ಆಡಳಿತ ಮಂಡಳಿ ಟಿಡಿಪಿ ವಿರುದ್ಧ ಜನ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಲಡ್ಡು ಪ್ರಸಾದಕ್ಕೆ ಸಂಬಂಧಿಸಿದಂತೆ ಗುಜರಾತ್ ಪ್ರಯೋಗಾಲಯದ ವರದಿ ಆಂಧ್ರ ಸರಕಾರಕ್ಕೆ ಸೇರುತ್ತಿದ್ದಂತೆ ದೇಶದಲ್ಲಿ ಕೋಲಾಹಲವೇ ಸೃಷ್ಟಿಯಾಗಿದೆ. ಆಂಧ್ರ ಸಿಎಂ ಚಂದ್ರಬಾಬು ನಾಯ್ಡು ಘಟನೆಗೆ ಹಿಂದಿನ ಸರಕಾರವೇ ಕಾರಣ. ಜಗನ್ ಮೋಹನ ಸರಕಾರ ಕಡಿಮೆ ಬೆಲೆಗೆ ಕಲಬೆರೆಕೆ ತುಪ್ಪ ಖರೀದಿಸಿದ್ದೆ ಇಷ್ಟೆಲ್ಲಾ ಅವಾಂತರಕ್ಕೆ ಕಾರಣ ಎಂದಿದ್ದಾರೆ.

ಇನ್ನು ಇಷ್ಟು ದಿನ ತಿರುಪತಿ ತಿಮ್ಮಪ್ಪನ ಪ್ರಸಾದ ತಯಾರಿಕೆಗೆ ತುಪ್ಪ ಒದಗಿಸಿದ ಆಂಧ್ರ ಪ್ರದೇಶದ ಸಂಸ್ಥೆಯೊಂದು, ತನ್ನ ಮೇಲಿನ ಆರೋಪನ್ನು ತಳ್ಳಿ ಹಾಕಿದೆ. ತಿರುಪತಿ ತಿಮ್ಮಪ್ಪ ದೇವಸ್ಥಾನಕ್ಕೆ ಶೇ. 5ರಷ್ಟು ತುಪ್ಪ ಮಾತ್ರ ನಾವು ಸರಬರಾಜು ಮಾಡಿದ್ದೇವೆ. ಅದು ಗುಣಮಟ್ಟದಿಂದ ಕೂಡಿದೆ. ಆ ಬಗ್ಗೆ ಯಾವುದೇ ರೀತಿಯ ತನಿಖೆ ನಡೆದರೂ ಎದುರಿಸಲು ಸಿದ್ಧ ಎಂದಿದೆ.

ಒಂದು ಕಡೆ ಸರಕಾರ ತಿರುಪತಿ ತಿಮ್ಮಪ್ಪನ ಲಡ್ಡು ಪ್ರಸಾದಲ್ಲಿ ಆಗಿರುವ ಕಲಬೆರಕೆಯನ್ನು ರಾಜಕೀಯಕ್ಕೆ ಬಳಸಿಕೊಳ್ಳುತ್ತಿದೆ. ಇನ್ನೊಂದೆಡೆ ತುಪ್ಪ ಪೂರೈಕೆಗೆ ಕಾರಣವಾದ ಸಂಸ್ಥೆ ತನಿಖೆಗೆ ಸಿದ್ಧ ಎಂದಿದೆ. ತಪ್ಪು ಯಾರದ್ದು ಎಂದು ತಿಳಿಯುವುದಕ್ಕಾಗಿ ಈಗಾಗಲೇ ಮೂವರು ತಜ್ಞರ ಸಮಿತಿ ರಚನೆಯಾಗಿದ್ದು, ಆ ಸಮಿತಿ ನೀಡುವ ವರದಿ ಮೇಲೆ ಲಡ್ಡು ಪ್ರಸಾದದ ಸತ್ಯ–ಮಿಥ್ಯ ಹೊರಬೀಳಲಿದೆ.

ದೇಶದ ಅತ್ಯಂತ ಶ್ರೀಮಂತ ದೇವಸ್ಥಾನದಲ್ಲಿ ಒಂದಾದ ತಿರುಪತಿ ತಿಮ್ಮಪ್ಪನ ಸನ್ನಿಧಾನದಲ್ಲಿಯೂ ಇಂಥದ್ದೊಂದು ಕಳಪೆ ದಂಧೆ ನಡೆಯುತ್ತದೆ. ಆ ಮೂಲಕ ಕೋಟ್ಯಾಂತರ ಜನರ ಧಾರ್ಮಿಕ ಭಾವನೆಗೆ ಧಕ್ಕೆಯಾಗುತ್ತದೆ ಎಂದರೆ, ಅಲ್ಲಿನ ಆಡಳಿತ ಮಂಡಳಿಗೂ ತಿರುಪತಿ ತಿಮ್ಮಪ್ಪನ ಬಗ್ಗೆ, ಅಲ್ಲಿಗೆ ಭೇಟಿ ನೀಡುವ ಭಕ್ತರ ಭಾವನೆಯನ್ನು ಗೌರವಿಸುವುದಿಲ್ಲ ಎನ್ನುವುದು ಸ್ಪಷ್ಟವಾಗುತ್ತದೆ.

ತಿರುಪತಿ ತಿಮ್ಮಪ್ಪ ಟ್ರಸ್ಟ್ ಕೇವಲ ದೇವಸ್ಥಾನದ ಆಡಳಿತದ ಮೇಲೆ ಗಮನ ಕೊಡಬೇಕು. ಅದನ್ನು ಬಿಟ್ಟು ರಾಜಕೀಯ ವ್ಯಕ್ತಿಗಳನ್ನು ಸೇರಿಸಿಕೊಂಡು ಆಡಳಿತದಲ್ಲಿಯೂ ರಾಜಕೀಯ ಬೆರೆಸುವ ಕೆಲಸ ತಕ್ಷಣ ನಿಲ್ಲಿಸಬೇಕು. ಜನರ ಭಾವನೆಗೆ ಧಕ್ಕೆಯಾಗದಂತೆ ನಡೆದುಕೊಳ್ಳಲು ಸಾಧ್ಯವಾಗದಿದ್ದರೆ, ಟಿಡಿಪಿಯನ್ನು ವಿಸರ್ಜಿಸಿ, ಸರಕಾರವೇ ತಿರುಪತಿ ದೇವಸ್ಥಾನವನ್ನು ನಿರ್ವಹಣೆ ಮಾಡಬೇಕು.

---

### ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘದ ವಾರ್ಷಿಕ ಸಭೆ

# ಪ್ರಗತಿಯತ್ತ ಶಿವಸಂಗಮ ಸಹಕಾರಿ ಸಂಘ




■ವಿಜಯಸಾಕ್ಷಿ ಸುದ್ದಿ, ಗದಗ

ಮಧ್ಯಮ ವರ್ಗದ ಜನರ ಆರ್ಥಿಕ ಮತ್ತು ಸಾಮಾಜಿಕ ಭದ್ರತೆಗೆ ಪೂರಕ ಸೇವೆಯಲ್ಲಿ ತನ್ನನ್ನು ಸಮರ್ಪಿಸಿಕೊಂಡಿರುವ ಗದುಗಿನ ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘ ನಿ. ಪ್ರಸಕ್ತ ವರ್ಷ 40 ಲಕ್ಷ 40 ಸಾವಿರ ರೂ.ಗಳ ನಿವ್ವಳ ಲಾಭ ಹೊಂದಿದ್ದು, ಶೇರುದಾರರಿಗೆ ಶೇ. 12ರಷ್ಟು ಡಿವಿಡೆಂಡ್ ನೀಡಲಿದೆ ಎಂದು ಸಂಘದ ಸಂಸ್ಥಾಪಕ ಅಧ್ಯಕ್ಷ ಜಿ.ಎಂ. ಪಲ್ಲೇದ ಹೇಳಿದರು.

ಅವರು ನಗರದ ಉಷಾದೇವಿ ಗೋವಿಂದರಾಜ ಕುಷ್ಟಗಿ ರೋಟರಿ ಕಮ್ಯೂನಿಟಿ ಕೇರ್‌ಸೆಂಟರ್‌ನಲ್ಲಿ ಏರ್ಪಡಿಸಿದ್ದ ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘದ 10ನೇ ವಾರ್ಷಿಕ ಸರ್ವಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಘದ ವರದಿ ವರ್ಷದಲ್ಲಿ 112 ಕೋಟಿ 52 ಲಕ್ಷ 52 ಸಾವಿರ ರೂ.ಗಳಷ್ಟು ವಹಿವಾಟು ನಡೆಸಿದ್ದು ಕಳೆದ ಸಾಲಿನ ಅಂತ್ಯಕ್ಕೆ ದುಡಿಯುವ ಬಂಡವಾಳ 28 ಕೋಟಿ 62 ಲಕ್ಷ 68 ಸಾವಿರ ರೂ.ಗಳಿದ್ದು ವರದಿ ವರ್ಷದ ಅಂತ್ಯಕ್ಕೆ 30 ಕೋಟಿ 70 ಲಕ್ಷ 51 ಸಾವಿರ ರೂ.ಗಳಷ್ಟಾಗಿದೆ. ನಿರ್ದೇಶಕರು ಮತ್ತು ಆಡಳಿತ ಸಿಬ್ಬಂದಿಯವರ ಕಟ್ಟುನಿಟ್ಟಿನ ಕ್ರಮ, ದಕ್ಷ ಮತ್ತು ಪ್ರಾಮಾಣಿಕ ಕಾರ್ಯಗಳಿಂದಾಗಿ ಸಂಘವು ಸಾರ್ವಜನಿಕರ ವಿಶ್ವಾಸದೊಂದಿಗೆ ಪ್ರಗತಿಯಲ್ಲಿ ಮುನ್ನಡೆದಿದೆ ಎಂದರು.

> ಸಂಘದ ಅಧ್ಯಕ್ಷ ವ್ಹಿ.ಎಸ್. ಶಿವಕಾಳಿಮಠ ಮಾತನಾಡಿ, ಠೇವಣಿದಾರರ, ಶೇರುದಾರರ ಅಪಾರವಾದ ವಿಶ್ವಾಸದೊಂದಿಗೆ ಸಂಘವು 10 ವರ್ಷದ ತನ್ನ ಸೇವೆಯ ಅವಧಿಯಲ್ಲಿ ಜನಮನ್ನಣೆಗೆ ಪಾತ್ರವಾಗಿದೆ. ಜನಮುಖಿ, ಸಮಾಜಮುಖಿಯಾಗಿ ಕಾರ್ಯ ಮಾಡುತ್ತಿದೆ. ರಕ್ತದಾನ, ನೇತ್ರದಾನ, ಶಾಲಾ ಮಕ್ಕಳಿಗೆ ನೋಟ್‌ಪುಸ್ತಕ ವಿತರಣೆ, ಸಾಧಕರಿಗೆ ಸನ್ಮಾನ, ಬೀದಿಬದಿ ವ್ಯಾಪಾರಸ್ತರಿಗೆ ಮತ್ತು ಹಿರಿಯ ನಾಗರಿಕರಿಗೆ ಸಹಾಯ, 300ಕ್ಕೂ ಹೆಚ್ಚು ನಿರುದ್ಯೋಗಿ ಪದವೀಧರರಿಗೆ ಉದ್ಯೋಗ ಅವಕಾಶ ಸೃಷ್ಟಿ ಮಾಡಲಾಗಿದೆ ಎಂದರು.

ಗಾಯಕಿ ಸಂಗೀತಾ ಭರಮಗೌಡ್ರ ಪ್ರಾರ್ಥಿಸಿದರು. ಬಿ.ಎಮ್. ಹಳ್ಳಿಕೇರಿ ಸ್ವಾಗತಿಸಿದರು. ಅಥಾವೆ ಪತ್ರಿಕೆಯನ್ನು ಟಿ.ವ್ಹಿ. ಸಂಶಿ ಮಂಡಿಸಿದರು. ಜಗದೀಶ ಹುಡೇದ 2024–25ನೇ ಅಂದಾಜು ಆಯ–ವ್ಯಯ ಪತ್ರಿಕೆ ಮಂಡಿಸಿದರು. ಎಸ್.ಎಮ್ .ಸರ್ವಿ ಲಾಭ ವಿಂಗಡಣೆ ವಿವರಿಸಿದರು. ಬಸವರಾಜ ಹಳ್ಳಿಕೇರಿ ನಿರೂಪಿಸಿದರು. ಮಲ್ಲು ಬಡಿಗೇರ ವಂದಿಸಿದರು.

ವೇದಿಕೆಯ ಮೇಲೆ ಲೆಕ್ಕಪರಿಶೋಧಕರಾದ ಕೆ.ಎಸ್. ಚಟ್ಟಿ, ನಿರ್ದೇಶಕರಾದ ಮಹೇಶ ಗಾಣಿಗೇರ, ಎಮ್.ಬಿ. ಲಿಂಗದಾಳ, ಪ್ರಶಾಂತ ದೇಸಾಯಿಮಠ, ಗಿರಿಯಪ್ಪ ಗಾಣಿಗೇರ, ಕಳಕಪ್ಪ ನಾಗರಾಳ, ಸುರೇಶ ಸರ್ವಿ, ಗೀತಾ ಪಲ್ಲೇದ, ಸರೋಜಾ ಲಿಂಗದಾಳ, ಶೋಭಾ ಶಿವಕಾಳಿಮಠ, ಕವಿತಾ ದೇಸಾಯಿಮಠ ಉಪಸ್ಥಿತರಿದ್ದರು.

---



ಗದಗ ಜಿಲ್ಲೆ ನರಗುಂದದಲ್ಲಿ ಹಜರತ್ ಮಹಮ್ಮದ್ ಪೈಗಂಬರ್ ಜಯಂತಿ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಅಬ್ದುಲ್ ಕಲಾಂ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಅಹ್ಮದ್ ಖಾಜಿ, ರಾಜು ಪೆಂಡಾರ್, ಯಸೂಫ್ ಡಂಬಳ, ರಜಾ ಯಾಸೀನ್, ಹಾಯಾಜ್ ನರಗುಂದ ಸೇರಿದಂತೆ ಸಮಾಜದ ಅನೇಕ ಹಿರಿಯರು, ಯುವಕರು ಭಾಗವಹಿಸಿದ್ದರು.

---

### ಮದರಸಾಗಳ ಬಗ್ಗೆ ಕೇಂದ್ರ ಸಚಿವರ ಹೇಳಿಕೆಗೆ ಓವೈಸಿ ತಿರುಗೇಟು

# 'ನಿಮಗೆ ಇಸ್ಲಾಮೋಫೋಬಿಯಾ ಕಾಯಿಲೆ ಇದೆ'

■ವಿಜಯಸಾಕ್ಷಿ ಸುದ್ದಿ, ಹೈದರಾಬಾದ್

ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ ಅವರ "ಮದರಸಾಗಳು ತನ್ನ ವಿದ್ಯಾರ್ಥಿಗಳಿಗೆ ಎಕೆ–47 ರೈಫಲ್‌ಗಳನ್ನು ಬಳಸುವ ಬಗ್ಗೆ ತರಬೇತಿ ನೀಡುತ್ತಿವೆ" ಎಂಬ ಹೇಳಿಕೆಗೆ ಎಐಎಂಐಎಂ ಅಧ್ಯಕ್ಷ ಅಸಾದುದ್ದೀನ್ ಓವೈಸಿ ಅವರು ತಿರುಗೇಟು ನೀಡಿದ್ದಾರೆ.




ಹೈದರಾಬಾದ್‌ನ ಎಐಎಂಐಎಂ ಪ್ರಧಾನ ಕಚೇರಿಯಲ್ಲಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಓವೈಸಿ, ಸಚಿವರಿಗೆ ಮುಸ್ಲಿಮರ ಮೇಲೆ ಏಕೆ ಅಂತಹ ದ್ವೇಷವಿದೆ; ನಿಮಗೆ ಇಸ್ಲಾಮೋಫೋಬಿಯಾ ಕಾಯಿಲೆ ಇದೆ ಎಂದು ಅವರು ಹೇಳಿದರು.

ಸ್ವಾತಂತ್ರ್ಯ ಚಳವಳಿಯ ಸಂದರ್ಭದಲ್ಲಿ ಮುಸ್ಲಿಮರು ತ್ಯಾಗ ಬಲಿದಾನಗಳನ್ನು ಮಾಡಿದ್ದಾರೆ. ಬ್ರಿಟಿಷರ ವಿರುದ್ಧ ಹೋರಾಡಲು ಮದರಸಾಗಳು 'ಫತ್ವಾ' (ನೋಟಿಸ್) ನೀಡಿದ್ದವು ಎಂದು ಓವೈಸಿ ಗಮನಸೆಳೆದರು.

---

# ಭಿನ್ನಾಭಿಪ್ರಾಯವನ್ನು ಸಹಿಸಿಕೊಳ್ಳುವುದೇ ಪ್ರಜಾಪ್ರಭುತ್ವದ ನಿಜವಾದ ಪರೀಕ್ಷೆ : ನಿತಿನ್ ಗಡ್ಕರಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

'ಆಡಳಿತಗಾರನು ತನ್ನ ವಿರುದ್ಧದ ಬಲವಾದ ಅಭಿಪ್ರಾಯವನ್ನು ಸಹಿಸಿಕೊಳ್ಳುತ್ತಾನೆ, ಅದು ಆತ್ಮಾವಲೋಕನಕ್ಕೆ ಕಾರಣವಾಗುತ್ತದೆ. ಭೀನ್ನಾಭಿಪ್ರಾಯ ಸಹಿಸಿಕೊಳ್ಳುವುದೇ ಪ್ರಜಾಪ್ರಭುತ್ವದ ಅತಿದೊಡ್ಡ ಪರೀಕ್ಷೆ' ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.



ಲೇಖಕರು ಮತ್ತು ಬುದ್ಧಿಜೀವಿಗಳು ನಿರ್ಭೀತಿಯಿಂದ ತಮ್ಮ ಅಭಿಪ್ರಾಯ ವ್ಯಕ್ತಪಡಿಸಬೇಕು ಎಂದು ಬಿಜೆಪಿಯ ಹಿರಿಯ ಮುಖಂಡ ಎಂಐಟಿ ವರ್ಲ್ಡ್ ಪೀಸ್ ವಿಶ್ವವಿದ್ಯಾಲಯದಲ್ಲಿ ಶುಕ್ರವಾರ ನಡೆದ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಹೇಳಿದರು.

"ರಾಜನು ತನ್ನ ವಿರುದ್ಧದ ಬಲವಾದ ಅಭಿಪ್ರಾಯವನ್ನು ಸಹಿಸಿಕೊಳ್ಳುತ್ತಾನೆ ಮತ್ತು ಅದರ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುವುದು ಪ್ರಜಾಪ್ರಭುತ್ವದ ದೊಡ್ಡ ಪರೀಕ್ಷೆ. ಭಾರತದಲ್ಲಿ, ಭಿನ್ನಾಭಿಪ್ರಾಯದ ಸಮಸ್ಯೆ ಇಲ್ಲ. ಆದರೆ, ಅಭಿಪ್ರಾಯದ ಕೊರತೆಯ ಸಮಸ್ಯೆ ಇದೆ" ಎಂದು ಸಚಿವರು ಹೇಳಿದರು.

"ನಾವು ಬಲಪಂಥೀಯರೂ ಅಲ್ಲ, ಎಡಪಂಥೀಯರೂ ಅಲ್ಲ. ನಾವು ಅವಕಾಶವಾದಿಗಳು. ಬರಹಗಾರರು ಮತ್ತು ಬುದ್ಧಿಜೀವಿಗಳು ಯಾವುದೇ ಭಯವಿಲ್ಲದೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾರೆ ಎಂದು ನಿರೀಕ್ಷಿಸಲಾಗಿದೆ" ಎಂದು ಅವರು ಸೇರಿಸಿದರು.

---

### ಎಚ್‌ಐವಿ ಏಡ್ಸ್ ನಿಯಂತ್ರಣ ಜಾಗೃತಿ ಕಾರ್ಯಕ್ರಮದಲ್ಲಿ ಡಿಎಚ್‌ಓ ಟಿ ಲಿಂಗರಾಜು

# ಹೆಚ್‌ಐವಿ ಏಡ್ಸ್ ಬಗ್ಗೆ ಅರಿವು ಮೂಡಿಸಿ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಯುವಜನೋತ್ಸವ–2024ರ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಹೆಚ್‌ಐವಿ ಏಡ್ಸ್ ತಡೆಗಟ್ಟಲು ತೀವ್ರಗೊಳಿಸಿದ ಐಇಸಿ ಪ್ರಚಾರ ಆಂದೋಲನದ ನಿಮಿತ್ತ ಅಂತರ್ ಪದವಿ ಕಾಲೇಜುಗಳ 18ರಿಂದ 25 ವರ್ಷದೊಳಗಿನ ಪುರುಷ ಮತ್ತು ಮಹಿಳಾ ವಿದ್ಯಾರ್ಥಿಗಳಿಗೆ ಕಬಡ್ಡಿ ಪಂದ್ಯಾವಳಿ ಆಯೋಜಿಸಲಾಗಿತ್ತು.

ನಗರದ ತಾಲೂಕಾ ಕ್ರೀಡಾಂಗಣದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಲಿಂಗರಾಜು ಟಿ ಉದ್ಘಾಟಿಸಿ ಮಾತನಾಡಿ, ಹೆಚ್.ಐ.ವಿ/ಏಡ್ಸ್ ರೋಗಿಗಳ ಸಂಖ್ಯೆಯನ್ನು ಸೊನ್ನೆಗೆ ತರಲು ಸರ್ಕಾರ ಹಲವು ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳುವುದರ ಮೂಲಕ ಯುವ ಸಮುದಾಯಕ್ಕೆ ಅರಿವು ಮೂಡಿಸುತ್ತಿದೆ. ಹೆಚ್‌ಐವಿ ಖಾಯಿಲೆ ಮುಖ್ಯವಾಗಿ ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ, ಸಂಸ್ಕರಿಸದ ಸೂಜಿ ಮತ್ತು ಸಿರಿಂಜ್‌ಗಳಿಂದ, ರಕ್ತ ಪರೀಕ್ಷೆ ಮಾಡದೇ ರಕ್ತ ಪಡೆಯುವುದರಿಂದ ಹಾಗೂ ಸೋಂಕಿತ ತಂದೆ–ತಾಯಿಂದ ಮಗುವಿಗೆ ಹರಡುತ್ತದೆ. ಇದರ ಬಗ್ಗೆ ಇನ್ನೂ ಹೆಚ್ಚಿನ ಪ್ರಚಾರ ಕೈಗೊಂಡು ಹೆಚ್‌ಐವಿ ಏಡ್ಸ್ ಹರಡದಂತೆ ಮುಂಜಾಗ್ರತೆ ಕ್ರಮ ತೆಗೆದುಕೊಳ್ಳಲು ಜಿಲ್ಲೆಯ ಎಲ್ಲಾ ಯುವಕರು ಹೆಚ್‌ಐವಿ ಏಡ್ಸ್ ಬಗ್ಗೆ ಅರಿವು ಹೊಂದಬೇಕು ಎಂದರು.


> ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಶಶಿಧರ ಎ ಮಾತನಾಡಿ, ಹೆಚ್‌ಐವಿ ಏಡ್ಸ್ ತಡೆಗಟ್ಟಲು ಜಿಲ್ಲೆಯಲ್ಲಿ ಈಗಾಗಲೇ ಶಾಲಾ–ಕಾಲೇಜುಗಳಲ್ಲಿ, ಸಮುದಾಯದಲ್ಲಿ ನಿರಂತರವಾಗಿ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಂದ ಜಾಗೃತಿ ಮೂಡಿಸಲಾಗುತ್ತಿದೆ. ಹೆಚ್‌ಐವಿ ಸೋಂಕಿತರನ್ನು ಗೌರವದಿಂದ ಕಾಣಬೇಕು. ಅವರಿಗೂ ಬದುಕುವ ಹಕ್ಕಿದೆ ಎಂಬುದನ್ನು ಪ್ರತಿಯೊಬ್ಬರೂ ತಿಳಿದುಕೊಂಡು ಇತರರಿಗೂ ತಿಳಿಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಪ್ರಕಾಶ ವಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಪ್ರಕಾಶ ಹೆಚ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ., ಜಿಲ್ಲಾ ಹೆಚ್‌ಐವಿ ಏಡ್ಸ್ ನಿಯಂತ್ರಣ ಕಾರ್ಯಕ್ರಮದ ಜಿಲ್ಲಾ ಮೇಲ್ವಿಚಾರಕಾರದ ಮಾಹಾಂತೇಶ, ದೈಹಿಕ ಶಿಕ್ಷಣಾಧಿಕಾರಿಗಳು, ಉಪನ್ಯಾಸಕರು, ಆಪ್ತ ಸಮಾಲೋಚಕರು ಮುಂತಾದವರಿದ್ದರು.

---

### ಶ್ರಮಜೀವಿಗಳ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಇಮ್ತಿಯಾಜ ಮಾನ್ವಿ

# ಸಮಸ್ಯೆಗಳ ಪರಿಹಾರಕ್ಕಾಗಿ ಸಮಾವೇಶ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದಲ್ಲಿ ಅಸಂಘಟಿತ ವಲಯವು ಆರ್ಥಿಕತೆಯ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ನಮ್ಮ ದೇಶದ ಜನಸಂಖ್ಯೆಯ ಸುಮಾರು 92ರಷ್ಟು ಅಸಂಘಟಿತ ಕಾರ್ಮಿಕರನ್ನು ಒಳಗೊಂಡಿದೆ. ಅಸಂಘಟಿತ ಕಾರ್ಮಿಕರಿಗೆ ಭದ್ರತೆ ಒದಗಿಸಲು ಸಾಕಷ್ಟು ಸಾಧನಗಳಿಲ್ಲ. ಕಾರ್ಮಿಕರ ಸಾಮಾಜಿಕ ಭದ್ರತೆ–ಯು ಕಾರ್ಮಿಕರ ಕುಟುಂಬಗಳಿಗೆ ಮತ್ತು ಸಮುದಾಯಕ್ಕೆ ಮುಖ್ಯವಾಗಿದೆ. ಆದ ಕಾರಣ ಸರ್ಕಾರಗಳು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತೆ ಹಾಗೂ ಸಮಸ್ಯಗಳ ಪಡಿಹಾರಕ್ಕಾಗಿ ಯೋಜನೆಗಳನ್ನು ರೊಪಿಸಬೇಕಾಗಿದೆ ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಜಿಲ್ಲಾಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಹೇಳಿದರು.

ಸೆ. 29ರಂದು ಗದಗ ಜಿಲ್ಲಾ ಸ್ಲಂ ಸಮಿತಿ ಹಾಗೂ ಶ್ರಮಜೀವಿಗಳ ವೇದಿಕೆಯ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿರುವ ಶ್ರಮಜೀವಿಗಳ ಬೃಹತ್ ಸಮಾವೇಶದ ಕುರಿತು ನಗರದ ಪ್ರವಾಸಿ ಮಂದಿರದಲ್ಲಿ ಕರೆದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಅಸಂಘಟಿತ ವಲಯವು ತಮ್ಮ ಉದ್ಯೋಗದಲ್ಲಿ ಮಾಡುತ್ತಿರುವ ಕೆಲಸಕ್ಕೆ ಕಡಿಮೆ ವೇತನದಂತಹ ಅನೇಕ ತೊಂದರೆಗಳನ್ನು ಎದುರಿಸುತ್ತಿದೆ. ಶೇ.90ರಷ್ಟು ಅಸಂಘಟಿತ ಕಾರ್ಮಿಕರು ಕೊಳಗೇರಿ ಪ್ರದೇಶಗಳಲ್ಲಿ ವಸತಿ, ನೈರ್ಮಲ್ಯ ಮುಂತಾದ ಸಮಸ್ಯೆಗಳ ನಡುವೆಯೇ ಬದುಕನ್ನು ಕಟ್ಟಿಕೊಂಡಿದ್ದಾರೆ. ಅಸಂಘಟಿತ ಕಾರ್ಮಿಕರು ಸಮಾಜದಲ್ಲಿ ದುರ್ಬಲ ವರ್ಗವಾಗಿರುವುದರಿಂದ ಅವರು ಅನೇಕ ಸಮಸ್ಯಗಳನ್ನು ಎದುರಿಸುತ್ತಿದ್ದಾರೆ. ನಮ್ಮ ಸಮಿತಿಯ ಕಾರ್ಯಕರತರು ಇದನ್ನು ಅರಿತುಕೊಂಡು ಸಮಾವೇಶದ ಯಶಸ್ವಿಗಾಗಿ ಶ್ರಮಿಸಬೇಕೆಂದು ಹೇಳಿದರು.

> ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ ಮಾತನಾಡಿ, ಶ್ರಮಜೀವಿಗಳ ಸಮಾವೇಶ ನಡೆಸುತ್ತಿರುವುದು ಸಂತಸದ ವಿಚಾರ. ನಮ್ಮ ಸಂಘಟಿತ ನಿರಂತರ ಹೋರಟಗಳ ಫಲವಾಗಿ ನಗರದ ಅನೇಕ ಕೊಳಗೇರಿ ಪ್ರದೇಶಗಳು ಅಭಿವೃದ್ಧಿಗೊಂಡು ಭೂಮಿಯ ಮಾಲಿಕತ್ವ ದೊರಕಿಸಿಕೊಡಲಾಗಿದೆ. ಸಮಾವೇಶಗಳನ್ನು ನಡೆಸುವ ಮೂಲಕ ನಗರದಲ್ಲಿಯ ಸ್ಲಂ ಜನರ ಶಕ್ತಿ ಪ್ರರ್ದಶನ ಮಾಡಲಾಗುತ್ತಿದೆ ಎಂದರು.

ಸ್ಲಂ ಸಮಿತಿ ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಮಾವೇಶದ ರೋಪರೇಶಗಳ ಕುರಿತು ವಿವರಿಸಿದರು. ಮಿಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ದುರ್ಗಪ್ಪ ಮಣ್ಣವಡ್ಡರ, ಮೆಹರುನಿಸಾ ಡಂಬಳ, ಮೈಮುನ ಬೈರಕದಾರ, ಮಂಜುನಾಥ ಶ್ರೀಗಿರಿ, ಮೆಹರುನಿಸಾ ಢಾಲಾಯತ, ಪ್ರೇಮಾ ಮಣವಡ್ಡರ, ಸುಶೀಲಮ್ಮ ಗೊಂದಾರ, ಮೆಹಬೂಬಸಾಬ ಬಳ್ಳಾರಿ, ಸಾಕ್ರುಬಾಯಿ ಗೋಸಾವಿ, ಖಾಜೇಸಾಬ ಇಸ್ಮಾಯಿಲನವರ, ಮಕ್ತುಮಸಾಬ ಮುಲ್ಲಾನವರ, ಈರಮ್ಮ ಬೇವಿನಮರದ, ನಾಗರಾಜ ಮಣವಡ್ಡರ, ಶಿವಾನಂದ ಶಿಗ್ಲಿ, ರಾಜೇಸಾಬ ಸೈಯದ, ಮಂಜುನಾಥ ಒಂಟಿಯಲಿ, ಬಾಷಾಸಾಬ ಡಂಬಳ, ಸಲೀಮ ಹರಿಹರ, ಮಲೇಶಪ್ಪ ಕಲಾಲ, ಚಂದ್ರಪ್ಪ ಲಕ್ಕುಂಡಿ, ದುರ್ಗಪ್ಪ ಮಣವಡ್ಡರ, ಶರಣಪ್ಪ ಬಿಂಗದಕಟ್ಟಿ ಹಾಗೂ ನೂರಾರು ಸ್ಲಂ ನವಾಸಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

---

## ಜಾಮೀನಿನ ಮೇಲೆ ಹೊರ ಬಂದಿದ್ದ ಅತ್ಯಾಚಾರ ಆರೋಪಿಯಿಂದ ಸಂತ್ರಸ್ತೆಯ ಗುಂಡಿಕ್ಕಿ ಹತ್ಯೆ!

■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಜಾಮೀನು ಪಡೆದು ಜೈಲಿನಿಂದ ಹೊರ ಬಂದಿದ್ದ ಅತ್ಯಾಚಾರ ಆರೋಪಿ ಅಪ್ರಾಪ್ತ ಸಂತ್ರಸ್ತೆಯನ್ನು ಗುಂಡಿಕ್ಕಿ ಹತ್ಯೆಗೈದಿರುವ ಘಟನೆ ಉತ್ತರ ಪ್ರದೇಶದ ಸಂಭಾಲ್‌ನಲ್ಲಿ ನಡೆದಿದೆ.

ಸೆಪ್ಟೆಂಬರ್ 18ರಂದು ರಾತ್ರಿ 10.30ರ ಸುಮಾರಿಗೆ ಸಂತ್ರಸ್ತೆ ತನ್ನ ತಾಯಿ ಮತ್ತು ಸಹೋದರನೊಂದಿಗೆ ತನ್ನ ಗ್ರಾಮಕ್ಕೆ ಹೋಗುತ್ತಿದ್ದಾಗ ತನ್ನ ತಾಯಿಯ ಚಿಕ್ಕಪ್ಪನ ಜೊತೆಯಲ್ಲಿದ್ದ ಆರೋಪಿ, ಸಂತ್ರಸ್ತೆಯನ್ನು ಅಡ್ಡಗಟ್ಟಿ ದಾಳಿ ನಡೆಸಿದ್ದಾನೆ ಎಂದು ಸಂಭಾಲ್ ಪೊಲೀಸರು ತಿಳಿಸಿದ್ದಾರೆ.

ಆರೋಪಿಯು ಬಾಲಕಿಗೆ ಎರಡು ಬಾರಿ ಗುಂಡು ಹಾರಿಸಿದ್ದು, ಆಕೆ ಸ್ಥಳದಲ್ಲೇ ಸಾವನ್ನಪ್ಪಿದ್ದಾಳೆ. ಆಕೆಯ ಸಹೋದರ ಮತ್ತು ತಾಯಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಎಂದು ಪೊಲೀಸರು ಹೇಳಿದ್ದಾರೆ.

"ದಾಳಿಯ ನಂತರ ಪರಾರಿಯಾಗಿರುವ ಹಂತಕನನ್ನು ಬಂಧಿಸಲು ನಾವು ವಿಶೇಷ ಕಾರ್ಯಾಚರಣೆ ಗುಂಪು (ಎಸ್‌ಒಜಿ) ರಚಿಸಿದ್ದೇವೆ. ಆತನ ಸಂಭಾವ್ಯ ಅಡಗುತಾಣಗಳ ಮೇಲೆ ನಮ್ಮ ತಂಡ ದಾಳಿ ನಡೆಸಿದೆ. ಆದರೆ, ಆತ ಪತ್ತೆಯಾಗಿಲ್ಲ" ಎಂದು ಸಂಭಾಲ್‌ನ ಪೊಲೀಸ್ ಅಧೀಕ್ಷಕ ಕೃಷ್ಣ ಕುಮಾರ್ ಬಿಷ್ಣೋಯ್ ವಿವರಿಸಿದ್ದಾರೆ.

---

## ಅತ್ಯಾಚಾರ ಪ್ರಕರಣ : ಬಿಜೆಪಿ ಶಾಸಕ ಮುನಿರತ್ನಗೆ 14 ದಿನ ನ್ಯಾಯಾಂಗ ಬಂಧನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಅತ್ಯಾಚಾರ ಪ್ರಕರಣದಲ್ಲಿ ಬಂಧಿತರಾಗಿರುವ ರಾಜರಾಜೇಶ್ವರಿ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ಅವರಿಗೆ ನ್ಯಾಯಾಲಯ 14 ದಿನಗಳ ನ್ಯಾಯಾಂಗ ಬಂಧನ ವಿಧಿಸಿದೆ.

ರಾಮನಗರದ ಕಗ್ಗಲೀಪುರ ಠಾಣೆಯಲ್ಲಿ 40 ವರ್ಷದ ಮಹಿಳೆಯೊಬ್ಬರು ದಾಖಲಿಸಿರುವ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಮುನಿರತ್ನ ಅವರನ್ನು ನಿನ್ನೆ (ಸೆ.20) ಬಂಧಿಸಿದ್ದ ಪೊಲೀಸರು, ಇಂದು (ಸೆ.21) ಬೆಳಿಗ್ಗೆ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ನ್ಯಾಯಾಲಯ ಅ.5ರವರೆಗೆ ನ್ಯಾಯಾಂಗ ಬಂಧನ ವಿಧಿಸಿದೆ ಎಂದು ತಿಳಿದು ಬಂದಿದೆ.

ಬಿಬಿಎಂಪಿ ಗುತ್ತಿಗೆದಾರನಿಗೆ ಜಾತಿ ನಿಂದನೆ ಮಾಡಿ ಜೀವ ಬೆದರಿಕೆ ಹಾಕಿದ್ದ ಪ್ರಕರಣದಲ್ಲಿ ಷರತ್ತುಬದ್ದ ಜಾಮೀನು ಪಡೆದಿದ್ದ ಮುನಿರತ್ನ ಅವರು, ನಿನ್ನೆ ಬೆಳಿಗ್ಗೆ ಪರಪ್ಪನ ಅಗ್ರಹಾರ ಜೈಲಿನಿಂದ ಬಿಡುಗಡೆಯಾಗಿದ್ದರು. ಈ ಬೆನ್ನಲ್ಲೇ ಅವರನ್ನು ಅತ್ಯಾಚಾರ ಪ್ರಕರಣದಲ್ಲಿ ಪೊಲೀಸರು ಬಂಧಿಸಿದ್ದರು.

### ರೆಡ್ ಕ್ರಾಸ್‌ನ ವಿಶ್ವ ಶಾಂತಿಗಾಗಿ ಜಾಥಾ ಕಾರ್ಯಕ್ರಮದಲ್ಲಿ ಶರಣು ಗೋಗೇರಿ ಅಭಿಪ್ರಾಯ

# ನೆಮ್ಮದಿಯ ಬದುಕನ್ನು ಕಂಡುಕೊಳ್ಳಬೇಕಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಶಾಂತಿಯನ್ನು ಉತ್ತೇಜಿಸಲು ಮತ್ತು ಶಾಂತಿಯುತ, ಸುಸ್ಥಿರ ಜಗತ್ತಿಗೆ ಜಾಗತಿಕ ಒಗ್ಗಟ್ಟಿನ ಶಕ್ತಿಯನ್ನು ಆಚರಿಸಲು ಪ್ರತಿವರ್ಷ ಸೆಪ್ಟಂಬರ್ 21ರಂದು ಅಂತಾರಾಷ್ಟ್ರೀಯ ಶಾಂತಿ ದಿನವನ್ನು ಆಚರಿಸಲಾಗುತ್ತದೆ. ವಿಶ್ವ ಶಾಂತಿ ದಿನ ಎಂದು ಕರೆಯಲ್ಪಡುವ ಇದು ಎಲ್ಲ ಜನಾಂಗಗಳು ಮತ್ತು ಜನರನ್ನು ವಿಶ್ವ ಶಾಂತಿಯ ಪ್ರಾಮುಖ್ಯತೆಯನ್ನು ಪ್ರಚಾರ ಮಾಡಲು ಪ್ರೋತ್ಸಾಹಿಸುತ್ತದೆ. ಪ್ರಸಕ್ತ ವರ್ಷದ ವಿಶ್ವಶಾಂತಿ-ದಿನವು ಶಾಂತಿಯ ಸಂಸ್ಕೃತಿಯನ್ನು ಬೆಳೆಸುವುದು ಎಂಬ ಧ್ಯೇಯವಾಕ್ಯದೊಂದಿಗೆ ಆಚರಿಸಲ್ಪಡುತ್ತಿದೆ. ಈ ಸಂದರ್ಭದಲ್ಲಿ ಜಗತ್ತಿನ ಪ್ರತಿಯೊಂದು ದೇಶಗಳು ನೆಮ್ಮದಿಯ ಬದುಕನ್ನು ಕಂಡುಕೊಳ್ಳಬೇಕಾಗಿದೆ ಎಂದು ಯುವ ಜನ ಕ್ರೀಡಾ ಅಧಿಕಾರಿಗಳಾದ ಶರಣು ಗೋಗೇರಿ ಅಭಿಪ್ರಾಯಪಟ್ಟರು.

ಅಂತಾರಾಷ್ಟ್ರೀಯ ಶಾಂತಿ ದಿನದ ಅಂಗವಾಗಿ ರೆಡ್ ಕ್ರಾಸ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಶಾಂತಿಗಾಗಿ ಜಾಥಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ಮುಖ್ಯ ಅತಿಥಿಗಳಾಗಿ ಆಗಮಿಸಿದ ಕನಕದಾಸ ಶಿಕ್ಷಣ ಸಮಿತಿಯ ಸಹಕಾರ್ಯದರ್ಶಿ ಡಾ. ಪುನೀತಕುಮಾರ ಬೆನಕನವಾರಿ ಮಾತನಾಡುತ್ತಾ, ಪ್ರಪಂಚದಾದ್ಯಂತ ಹೆಚ್ಚುತ್ತಿರುವ ಸಂಘರ್ಷಗಳು ಕಡಿಮೆಯಾಗಲು ಶಾಂತಿಯ ವಾತಾವರಣದ ಅವಶ್ಯಕತೆಯಿದೆ. 43 ವರ್ಷಗಳ ಹಿಂದೆ ವಿಶ್ವ ಸಂಸ್ಥೆ ಸ್ಥಾಪಿಸಿದ ದಿನವು ವಿಶ್ವಕ್ಕೆ ಶಾಂತಿಯನ್ನು ಒತ್ತಿ ಹೇಳುತ್ತದೆ. ಭೌಗೋಳಿಕ, ರಾಜಕೀಯ ಉದ್ವಿಗ್ನಗಳು ನಡೆಯುತ್ತಿರುವ ಇಂದಿನ ಜಗತ್ತಿನಲ್ಲಿ ಶಾಂತಿ ದಿನ ಮಹತ್ವವನ್ನು ಪಡೆಯುತ್ತದೆ. ವಿಶ್ವದಲ್ಲಿ ಶಾಂತಿ ಸ್ಥಾಪಿಸುವಲ್ಲಿ ರೆಡ್ ಕ್ರಾಸ್ ಪಾತ್ರ ಮಹತ್ವದ್ದು ಎಂದರು.

> ಕಾರ್ಯಕ್ರಮದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಡಾ. ಆರ್.ಎನ್. ಗೋಡಬೋಲೆ ವಿಶ್ವಶಾಂತಿ ದಿನದ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಹಾವಿದ್ಯಾಲಯದ ಮುಖ್ಯಸ್ಥರಿಗೆ ವಿದ್ಯಾರ್ಥಿಗಳಿಗೆ ಅಭಿನಂದನೆ ತಿಳಿಸಿ, ಪ್ರತಿಯೊಬ್ಬರೂ ಈ ದಿನದಂದು ಮಾತ್ರ ಶಾಂತಿ ಭಾವವನ್ನು ಅನುಸರಿಸದೆ ಪ್ರತಿದಿನ ಶಾಂತಿ ಸೌಹಾರ್ದತೆಯಿಂದ ವರ್ತಿಸಿದರೆ ಜಗತ್ತಿನಲ್ಲಿ ಶಾಂತಿ ನೆಲಸಲು ಸಾಧ್ಯವಾಗುತ್ತದೆ. ಇದರಿಂದ ಜಗತ್ತಿನಲ್ಲಿ ಮಾನವೀಯ ಮೌಲ್ಯಗಳು ಬೆಳೆಯಲು ಸಹಾಯವಾಗುತ್ತದೆ ಎಂದರು.

ವಿಶ್ವಶಾಂತಿ ದಿನದ ಜಾಥಾವು 1200 ವಿದ್ಯಾರ್ಥಿಗಳೊಂದಿಗೆ ಪ್ರಾರಂಭಗೊಂಡು, ಎ.ಪಿ.ಎಂ.ಸಿ ರೋಡ್, ಬಸವೇಶ್ವರ ಸರ್ಕಲ್, ಹುಯಿಲಗೋಳ ನಾರಾಯಣರಾವ್ ಸರ್ಕಲ್ ಮುಖಾಂತರ ಗಾಂಧಿ ಸರ್ಕಲ್‌ನಿಂದ ಕ್ರೀಡಾಂಗಣದಲ್ಲಿ ಮುಕ್ತಾಯಗೊಂಡಿತು. ಜಾಥಾದಲ್ಲಿ ಗದಗ ನಗರದ ಕೆ.ಎಸ್.ಎಸ್. ಕಾಲೇಜು, ಸರಕಾರಿ ಮಹಿಳಾ ಕಾಲೇಜು, ಸರಕಾರಿ ಪ್ರಥಮದರ್ಜೆ ಕಾಲೇಜು, ಪಿ.ಪಿ.ಜಿ ಕಲಾ ಮಹಾವಿದ್ಯಾಲಯ, ಕೆ.ಎಲ್.ಇ. ಕಲಾ ಮಹಾವಿದ್ಯಾಲಯ, ಪಿ.ಪಿ.ಜಿ. ಬಿಎಡ್ ಕಾಲೇಜು, ಎಚ್.ಸಿ.ಇ.ಎಸ್. ಕಾಲೇಜು, ಅಬ್ದುಲ್‌ಕಲಾಂ ಕಾಲೇಜು, ಜಿಮ್ಸ್ ನರ್ಸಿಂಗ್ ಕಾಲೇಜು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ, ಎ.ಎಸ್.ಎಸ್. ಕಾಲೇಜು, ಜೆ.ಟಿ. ಕಾಲೇಜು, ಜೆ.ಪಿ. ಬಿಎಡ್ ಕಾಲೇಜು, ಎಮ್.ಎಮ್. ಪ್ರಥಮದರ್ಜೆ ಕಾಲೇಜಿನ ಎನ್.ಎಸ್.ಎಸ್ ಹಾಗೂ ಯುವ ರೆಡ್ ಕ್ರಾಸ್‌ನ ಸ್ವಯಂ ಸೇವಕರು ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಗೌರವ ಕಾರ್ಯದರ್ಶಿ ಡಾ. ಎಮ್.ಡಿ. ಸಮುದ್ರಿ, ಆಡಳಿತ ಮಂಡಳಿ ಸದಸ್ಯರಾದ ದ್ರಾಕ್ಷಾಯಣಿ ಮೂರಸಿಳ್ಳಿನ, ಗಣೇಶಸಿಂಗ್ ಬ್ಯಾಳಿ, ಚೆನ್ನರಡ್ಡಿ ಗೂಳರಡ್ಡಿ, ಸದಸ್ಯರು ಗೀತಾ ಗುಡೇನಕಟ್ಟಿ, ಸಂಜಯ ಬಾಗಮಾರ್ ಹಾಗೂ ಡಿಡಿಆರ್‌ಸಿ ಸಿಬ್ಬಂದಿಯವರು ಹಾಜರಿದ್ದರು.



ಗದುಗಿನ ವೀರೇಶ್ವರ ಲೈಬ್ರರಿ ಹತ್ತಿರ ಪ್ರತಿಷ್ಠಾಪಿಸಲಾಗಿರುವ ಹಿಂದೂ ಮಹಾಗಣಪತಿಗೆ ವಿಶೇಷ ಪೂಜೆ ನೆರವೇರಿತು. ಗಣ್ಯ ಉದ್ಯಮಿಗಳು ಹಾಗೂ ಬಿಜೆಪಿ ಮುಖಂಡರಾದ ವಿಜಯಕುಮಾರ ಗಡ್ಡಿ ದಂಪತಿಗಳು, ಸಾಗರ್ ಪವಾರ್ ದಂಪತಿಗಳು ಹಾಗೂ ಕಿರಣ ಭಾಂಡಗೆ ದಂಪತಿಗಳು ಮಹಾಗಣಪತಿಗೆ ಪೂಜೆ ಸಲ್ಲಿಸಿ ಕೃತಾರ್ಥರಾದರು. ಈ ಸಂದರ್ಭದಲ್ಲಿ ಗಜಾನನ ಮಂಡಳಿ ಸದಸ್ಯರು ಹಾಗೂ ಹಿಂದೂ ಮಹಾಗಣಪತಿ ಭಕ್ತಾದಿಗಳು ಪಾಲ್ಗೊಂಡಿದ್ದರು.



ಕೊಪ್ಪಳ: ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ತಾಲೂಕು ಮಟ್ಟದ ದಸರಾ ಕ್ರೀಡಾಕೂಟಕ್ಕೆ ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್ ಚಾಲನೆ ನೀಡಿದರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ ಜಾಬಗೌಡರ ಅಧ್ಯಕ್ಷತೆ ವಹಿಸಿದ್ದರು. ಕ್ರೀಡಾಕೂಟದಲ್ಲಿ ಯುವ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಯುವ ಸಬಲೀಕರಣ ಕ್ರೀಡಾ ಇಲಾಖೆ ಸಹಾಯಕ ಕ್ರೀಡಾಧಿಕಾರಿ ಶರಣ ಬಸವ ಬಂಡಿಹಾಳ, ದೈಹಿಕ ಶಿಕ್ಷಾಧಿಕಾರಿ ಬಸವರಾಜ ಎ. ಅನೇಕರು ಇದ್ದರು.

# ಸ್ವಚ್ಛತಾ ಪೌರಕಾರ್ಮಿಕರಿಗೆ ಕ್ರೀಡಾಕೂಟ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯ ಪೌರಕಾರ್ಮಿಕರಿಗೆ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಕ್ರೀಡಾಕೂಟವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಪೌರಾಯುಕ್ತರಾದ ರಮೇಶ ಪೊತದಾರ್, ನಗರಸಭೆ ಪರಿಸರ ಅಭಿಯಂತರ ಆನಂದ ಬದಿ, ಹಿರಿಯ ಆರೋಗ್ಯ ನಿರೀಕ್ಷಕರಾದ ಎಂ.ಎಂ ಮಕಾನದಾರ, ಪೌರಕಾರ್ಮಿಕರ ಹಿರಿಯರಾದ ವಿರುಪಾಕ್ಷಪ್ಪ ಬಿ.ರಾಮಗಿರಿ, ಹೈಸ್ಕೂಲಿನ ಪ್ರಿನ್ಸಿಪಾಲ್, ದೈಹಿಕ ಶಿಕ್ಷಕರು, ಶಿಕ್ಷಕರು ಹಾಗೂ ಪೌರ ಕಾರ್ಮಿಕರ ನೌಕರರ ಜಿಲ್ಲಾಧ್ಯಕ್ಷ ಹೇಮೇಶ್ ಯಟ್ಟಿ, ಗೌರವ ಅಧ್ಯಕ್ಷ ನಾಗರಾಜ್ ಬಳ್ಳಾರಿ, ಜಿಲ್ಲಾ ಉಪಾಧ್ಯಕ್ಷ ಕೆಂಚಪ್ಪ ಪ್ರಜಾರ್, ಶಾಖಾ ಸಂಘದ ಅಧ್ಯಕ್ಷ ಚಂದ್ರು ಹಾದಿಮನಿ, ಸಣ್ಣಪ್ಪ ಬೋಳಮ್ಮನವರ್, ಪಂಚಾಕ್ಷರಿ ದೊಡ್ಡಮನಿ, ವಾಸು ಹಾದಿಮನಿ, ಮೃತ್ಯುಂಜಯ ದೊಡಮನಿ, ಹನುಮಂತ ದೊಡ್ಡಮನಿ, ಮುತ್ತು ಚಲವಾದಿ, ಪರಶುರಾಮ್ ಪ್ರಜಾರ್, ಅರ್ಜುನ್ ದೊಡ್ಡಮನಿ, ವಿಶ್ವನಾಥ ದೊಡ್ಡಮನಿ ಮತ್ತು ಪೌರಕಾರ್ಮಿಕರ ಉಪಸ್ಥಿತಿಯಲ್ಲಿ ವಿವಿಧ ಆಟಗಳನ್ನು ಆಡಲಾಯಿತು.

100 ಮೀಟರ್ ಓಟ, ಚಕ್ರ ಎಸೆತ, ಗುಂಡು ಎಸೆತ, ಕಬ್ಬಡಿ, ಲಿಂಬು ಸ್ಪೂನ್, ಕ್ರಿಕೆಟ್ ಹಾಗೂ ಹಗ್ಗ ಜಗ್ಗಾಟಗಳನ್ನು ಆಡಿ ಎಲ್ಲಾ ಕಾರ್ಮಿಕರು ಖುಷಿಯಿಂದ ಸಂಭ್ರಮಿಸಿದರು.

### ಸ್ವಚ್ಛತೆಯೇ ನಮ್ಮ ಉಸಿರಾಗಲಿ: ಸಿಇಓ ರಾಹುಲ್ ಪಾಂಡೆ

# ಸ್ವಚ್ಛತೆ ಪ್ರಜ್ಞೆ ಪ್ರತಿಯೊಬ್ಬರಿಂದ ಹೊರಹೊಮ್ಮಬೇಕು

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಪ್ರತಿಯೊಬ್ಬರು ಸ್ವಚ್ಛತೆಯಲ್ಲಿ ಭಾಗಿಯಾಗಬೇಕು. ಸ್ವಚ್ಛತೆಯೇ ನಮ್ಮ ಉಸಿರಾಗಬೇಕೆಂದು ಎಂದು ಜಿ.ಪಂ.ಸಿಇಒ ರಾಹುಲ್ ರತ್ನಂ ಪಾಂಡೆ ಕರೆ ನೀಡಿದರು.

ತಾಲೂಕಿನ ಹಾಲವರ್ತಿ ಗ್ರಾಮ ಪಂಚಾಯತಿಯಲ್ಲಿ ಸೆ.21ರಂದು ನಡೆದ ಬಸಾಪುರ ಗ್ರಾಮದ ನಾಲಾ ಸ್ವಚ್ಛಗೊಳಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.



ಸ್ವಚ್ಛತೆ ಪ್ರಜ್ಞೆಯು ಪ್ರತಿಯೊಬ್ಬರಿಂದ ಹೊರಹೊಮ್ಮಬೇಕು. ಪ್ರತಿಯೊಂದು ಕುಟುಂಬ ತನ್ನ ಸುತ್ತಲೂ ಇರುವ ವಾತಾವರಣ ಶುಚಿಯಾಗಿಟ್ಟುಕೊಳ್ಳಬೇಕು. ಗ್ರಾಮ ಪಂಚಾಯತಿಯಿಂದ ಈಗಾಗಲೇ ಸ್ವಚ್ಛ ವಾಹಿನಿಗಳನ್ನು ನೀಡಲಾಗಿದ್ದು ಕಸವನ್ನು ಎಲ್ಲೆಂದರಲ್ಲಿ ಬಿಸಾಡದೇ ಅವುಗಳಿಗೆ ಹಸಿ, ಒಣ ಕಸ ಪ್ರತ್ಯೇಕಿಸಿ ನೀಡಬೇಕು. ಪ್ರತಿವಾರದಲ್ಲಿ ನಾವುಗಳು ಸ್ವಚ್ಛತೆಗೆ 02 ಗಂಟೆಗಳ ಕಾಲ ಮೀಸಲಿಡಬೇಕು. ಇದರಿಂದ ನಮಗೆ ವ್ಯಾಯಾಮ ಆಗುವುದರ ಜೊತೆ-ಗೆ ಸ್ವಚ್ಛ ಸುಂದರ ವಾತಾವರಣ ನಿರ್ಮಿಸಿದಂತಾಗುತ್ತದೆ ಎಂದರು.

ಗ್ರಾಮದಲ್ಲಿರುವ ಐತಿಹಾಸಿಕ ಸ್ಥಳಗಳು, ಸಾರ್ವಜನಿಕ ಸ್ಥಳದಲ್ಲಿ ಜನರನ್ನು ಒಗ್ಗೂಡಿಸಿ ಇಂತಹ ಶ್ರಮದಾನ ಕಾರ್ಯಕ್ರಮ ಜರುಗಿಸುವದರಿಂದ ಅವರಲ್ಲಿ ಸ್ವಚ್ಛತೆಯ ಪ್ರಜ್ಞೆ ಮೂಡಲು ಸಹಕಾರವಾಗುತ್ತದೆ. ಪ್ರತಿಯೊಬ್ಬರು ತಮ್ಮ ಮನೆಯ ಮುಂದೆ ಮರಗಳನ್ನು ನೆಟ್ಟು ಪೋಷಿಸಿದಲ್ಲಿ ಅರಣ್ಯೀಕರಣ ಪ್ರಮಾಣ ಹೆಚ್ಚಳವಾಗುವುದರ ಜೊತೆ-ಗೆ ಕಾಲಕಾಲಕ್ಕೆ ಮಳೆಯಾಗಿ ರೈತರು ತಮ್ಮ ಜಮೀನಿನಲ್ಲಿ ಬೆಳೆ ಬೆಳೆಯಲು ಅನುಕೂಲವಾಗುತ್ತದೆ ಎಂದರು.



ಜಿ.ಪಂ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಮಾತನಾಡಿ, ಸ್ವಚ್ಛತೆಯ ಸೇವೆ ಕಾರ್ಯಕ್ರಮಗಳು ಅ.2ರ ವರೆಗೆ ಗ್ರಾಮ ಪಂಚಾಯತಿ ವ್ಯಾಪ್ತಿಯ ನಡೆಯಲಿವೆ. ಆದ್ದರಿಂದ ಶಾಲಾ ಅಂಗನವಾಡಿ, ದೇವಸ್ಥಾನ, ಮಸೀದಿ, ಮಂದಿರಗಳು, ಕಲ್ಯಾಣಿ, ಬಾವಿ, ಗೊಕಟ್ಟೆ ನಾಲಾಗಳನ್ನು ಸ್ವಚ್ಛಗೊಳಿಸುವ ಕಾರ್ಯಕ್ಕೆ ಪ್ರತಿಯೊಬ್ಬರು ಕೈಜೋಡಿಸಬೇಕು ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷರಾದ ಜಯಪ್ರದಾ ಭರಮಪ್ಪ ಗೊರವರ, ಉಪಾಧ್ಯಕ್ಷ ಮಹೇಂದ್ರ ಹಾಲವರ್ತಿ, ತಾ. ಪಂ.ಇಒ ದುಂಡಪ್ಪ ತುರಾದಿ, ಇತರರು ಉಪಸ್ಥಿತರಿದ್ದರು.

# ಆರೋಗ್ಯಕ್ಕಾಗಿ ಸ್ವಚ್ಛತೆಗೆ ಆದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ನಾವು ಮಾನಸಿಕವಾಗಿ ಹಾಗೂ ದೈಹಿಕವಾಗಿ ಆರೋಗ್ಯಕರವಾಗಿರಬೇಕಾದರೆ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಪ್ರತಿದಿನ ಸ್ವಚ್ಛತೆ ಎಂಬುದು ನಮ್ಮೆಲ್ಲರ ಕರ್ತವ್ಯವಾಗಬೇಕು ಎಂದು ಪುರಸಭೆ ಆರೋಗ್ಯ ವಿಭಾಗದ ರಾಘವೇಂದ್ರ ಮಂತಾ ಹೇಳಿದರು.

ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಸ್ವಚ್ಛ ಭಾರತ ಮಿಷನ್, ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ ಹಾಗೂ ಪುರಸಭೆ ಕಾರ್ಯಾಲಯದಿಂದ ಶನಿವಾರ ನಡೆದ ಸ್ವಚ್ಛತಾ ಹೀ ಸೇವಾ ಅಡಿ ಸ್ವಭಾವ ಸ್ವಚ್ಛತೆ, ಸಂಸ್ಕಾರ ಸ್ವಚ್ಛತೆ ನಿಮಿತ್ತ ನಡೆದ ರಂಗೋಲಿ ಸ್ಪರ್ಧೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪಟ್ಟಣದಲ್ಲಿ ಸೆ.17ರಿಂದ ಅ.2ರವರೆಗ ನಡೆಯುವ ಸ್ವಚ್ಛತಾ ಹೀ ಸೇವಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಪರಿಸರ ಸ್ವಚ್ಛವಾಗಿದ್ದರೆ ಆರೋಗ್ಯವಂತವಾಗಿ ಇರಲು ಸಾಧ್ಯವಿದೆ. ಹೀಗಾಗಿ ನಾವು ವಾಸಿಸುವ ಮತ್ತು ಕರ್ತವ್ಯ ನಿರ್ವಹಿಸುವ ಸ್ಥಳದಲ್ಲಿ ಅದರಲ್ಲೂ ಶಾಲಾ, ಕಾಲೇಜು, ದೇವಸ್ಥಾನ, ಸಮುದಾಯ ಕೇಂದ್ರಗಳು ಸೇರಿ ಜನನಿಬಿಡ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಈ ವೇಳೆ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ರಂಗೋಲಿ ಸ್ಪರ್ಧೆಯಲ್ಲಿ ಶ್ರೇಯಾ ರಾಯಬಾಗಿ ಪ್ರಥಮ ಸ್ಥಾನ, ನವ್ಯಾ ರಾಯಬಾಗಿ ದ್ವಿತೀಯ ಹಾಗೂ ವೀಣಾ ಶಾಬಾದಿ ತೃತೀಯ ಸ್ಥಾನ ಪಡೆದರು. ಇದಕ್ಕೂ ಮುನ್ನ ಪುರಸಭೆ ಅಧಿಕಾರಿ ಶಿವಕುಮಾರ ಇಲಾಳ ವಿದ್ಯಾರ್ಥಿಗಳಿಗೆ ಸ್ವಚ್ಛತೆ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು.

ಶಿಕ್ಷಕರಾದ ಡಿ.ಆರ್. ಮ್ಯಾಗೇರಿ, ಐ.ಎಸ್. ಬದಾಮಿ, ಹನಮಂತ ಭಜಂತ್ರಿ, ಎ.ಜಿ. ಬೂದಿಹಾಳ, ಎ.ಎನ್. ರೋಣದ, ಎಸ್.ಡಿ. ಕುರಿ, ಆರ್.ಎಸ್. ಶೃಂಗರಾಪುರ, ಸುರೇಶ ಮಹೇಂದ್ರಕರ, ಮೈಬು ಚಾಮಲಾಪೂರ ಸೇರಿ ಇತರರು ಇದ್ದರು.

# ಕಾನೂನು ಮಹಾ ವಿದ್ಯಾಲಯ ಶುಲ್ಕ ಹೆಚ್ಚಳ : ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾ ವಿದ್ಯಾಲಯದ ವಿದ್ಯಾರ್ಥಿಗಳ ಪ್ರವೇಶ ಶುಲ್ಕ ಪ್ರಸ್ತುತ ಸಾಲಿಗೆ 30 ಸಾವಿರ ರೂ.ಗಳಿಗೆ ಹೆಚ್ಚಿಸಿರುವ ಕ್ರಮ ವಿರೋಧಿಸಿ ದ್ವಿತೀಯ ಹಾಗೂ ತೃತೀಯ ವರ್ಷದ ವಿದ್ಯಾರ್ಥಿಗಳು ಕಾಲೇಜ್ ಆವರಣದಲ್ಲಿ ಶನಿವಾರ ಪ್ರತಿಭಟನೆ ನಡೆಸಿ ಆಡಳಿತ ಮಂಡಳಿ ವಿರುದ್ಧ ಘೋಷಣೆ ಕೂಗಿದರು.

ಕಳೆದ ವರ್ಷದ 22450. ರೂ ಇತ್ತು ಈ ಶುಲ್ಕವೇ ಬಹುತೇಕ ಎಲ್ಲ ವಿದ್ಯಾರ್ಥಿಗಳಿಗೆ ಹೊರೆಯಾಗಿತ್ತು, ಆದರೆ ಪ್ರಸ್ತುತ ಸಾಲಿನ ಶುಲ್ಕ 30000. ರೂ ಆಗಿದೆ. ಇದರಿಂದ ಹಿಂದುಳಿದ ಪ್ರದೇಶವಾದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿರು ಬಹುತೇಕ ವಿದ್ಯಾರ್ಥಿಗಳು ಬಡವರು ಇದ್ದಾರೆ. ಇಷ್ಟು ಶುಲ್ಕ ಪಾವತಿಸಲು ಸಾಧ್ಯವಾಗದೆ ಅನೇಕರು ನ್ಯಾಯವಾದಿಗಳಾಗುವ ಆಸೆ ಈಡೇರದೇ ಇರಬಹುದು ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಹಿಂದುಳಿದ ಪ್ರದೇಶದಲ್ಲಿರುವ ಕಾಲೇಜಿನ ಪ್ರವೇಶ ಶುಲ್ಕವನ್ನು ದಿಢೀರ್ ಹೆಚ್ಚಳ ಮಾಡಿರುವ ಆಡಳಿತ ಮಂಡಳಿಯ ಕ್ರಮ ಸರಿಯಾದದು ಅಲ್ಲ ಮತ್ತು ಈ ಕ್ರಮದಿಂದ ಅನೇಕ ವಿದ್ಯಾರ್ಥಿಗಳು ಕಾನೂನು ಪದವಿಯಿಂದ ವಂಚಿತರಾಗಲಿದ್ದಾರೆ ಎಂದು ತಿಳಿಸಿದ್ದಾರೆ.

ಪ್ರಥಮ ವರ್ಷದ ಪ್ರವೇಶ ಪಡೆಯುವಾಗ ಹಿಂದೆ ಇದ್ದ ಪ್ರಾಚಾರ್ಯರು, ಪ್ರಥಮ ವರ್ಷದ ಶುಲ್ಕ ಹೆಚ್ಚು (22450) ಪಾವತಿಸಬೇಕು ನಂತರದ ದ್ವಿತೀಯ, ತೃತೀಯ ವರ್ಷಗಳಲ್ಲಿ ಕಡಿಮೆ ಗೊಳಿಸಲಾಗುವುದು ಎಂದು ನಮಗೆ ಭರವಸೆ ಕೊಟ್ಟಿದ್ದರು. ಆದರೆ 2023-24 ನೇ ಸಾಲಿನ ಶುಲ್ಕದ ಜೊತೆಗೆ ಹೆಚ್ಚುವರಿಯಾಗಿ 1 ಸಾವಿರ ರೂ.ಗಳನ್ನು ಅಭಿವೃದ್ಧಿ ಶುಲ್ಕವಾಗಿ ಪಾವತಿಕೊಂಡಿದ್ದಾರೆ. ಮತ್ತು ಪ್ರಥಮ ವರ್ಷದ ವಿದ್ಯಾರ್ಥಿಗಳಿಂದ ಶುಲ್ಕದ ಜೊತೆಗೆ 3 ಸಾವಿರ ರೂ. ಗಳನ್ನು ಹೆಚ್ಚುವರಿಯಾಗಿ ಪಾವತಿ ಕೊಂಡಿದ್ದಾರೆ. ವಿದ್ಯಾರ್ಥಿಗಳಿಗೆ ಕೊಟ್ಟ ಭರವಸೆಯ ವಿರುದ್ಧವಾಗಿ ಪ್ರಸ್ತುತ 7550 ರೂ. ಗಳನ್ನು ಏಕಾಏಕಿ ಶುಲ್ಕವನ್ನು ಹೆಚ್ಚಳ ಮಾಡಿ ವಿದ್ಯಾರ್ಥಿಗಳಿಗೆ ಆಡಳಿತ ಮಂಡಳಿ ಅನ್ಯಾಯ ಮಾಡುತ್ತಿದೆ, ಅಲ್ಲದೇ ಇದೇ ವೇಳೆ ವಿವಿಧ ಬೇಡಿಕೆ ಈಡೇರಿಸಲು ಮನವಿ ಸಲ್ಲಿಸಲಾಯಿತು.

### ಬೀದಿ ಬದಿ ವ್ಯಾಪಾರಿಗಳಿಂದ ಪುರಸಭೆ ಅಧ್ಯಕ್ಷರಿಗೆ ಮನವಿ

# ವ್ಯಾಪಾರಸ್ಥರ ಹಿತ ಕಾಯಲು ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಬೀದಿ ಬದಿ ವ್ಯಾಪಾರಸ್ಥರ ಹಿತ ಕಾಯಲು ಪುರಸಭೆ ಆಡಳಿತ ಮುಂದಾಗಬೇಕು ಎಂದು ಒತ್ತಾಯಿಸಿ ಶನಿವಾರ ಇಲ್ಲಿನ ಬೀದಿ ಬದಿ ವ್ಯಾಪಾರಿ ಸಂಘಟನೆಗಳ ಒಕ್ಕೂಟದಿಂದ ಪುರಸಭೆ ಅಧ್ಯಕ್ಷ ಸುಭಾಸ ಮ್ಯಾಗೇರಿ ಅವರಿಗೆ ಮನವಿ ನೀಡಿದರು.

> ಬೀದಿ ಬದಿ ವ್ಯಾಪಾರಿಗಳನ್ನು ಸ್ಥಳಾಂತರಿಸುವ ಮೊದಲು ಪಟ್ಟಣ ವ್ಯಾಪಾರ ಸಮಿತಿ ಸದಸ್ಯರೊಂದಿಗೆ ಚರ್ಚಿಸಬೇಕಿತ್ತು. ಅಲ್ಲದೆ ನಮ್ಮನ್ನು ಸ್ಥಳಾಂತರಿಸಲು ಯಾವುದೇ ಠರಾವು ಅಥವಾ ನೋಟಿಸ್ ನೀಡಿಲ್ಲ ಎಂದ ದೂರಿದ ಬೀದಿ ಬದಿ ವ್ಯಾಪಾರಸ್ಥರು, ಪಟ್ಟಣದಲ್ಲಿ ಬೀದಿ ಬದಿ ವ್ಯಾಪಾರ ವಹಿವಾಟನ್ನು ನೆಚ್ಚಿಕೊಂಡು ಈಗಾಗಲೇ ಅನೇಕ ಸ್ವ-ಸಹಾಯ ಗುಂಪು ಮತ್ತು ಫೈನಾನ್ಸ್‌ಗಳಲ್ಲಿ ಸಾಲ ತೆಗೆದುಕೊಂಡಿರುವ ಬೀದಿ ಬದಿ ವ್ಯಾಪಾರಸ್ಥರಿಗೆ ಅಧಿಕಾರಿಗಳ ನಡೆ ದೊಡ್ಡ ಹೊಡೆತವನ್ನು ನೀಡಿದೆ ಎಂದು ಬೀದಿ ಬದಿ ವ್ಯಾಪಾರಿಗಳು ದೂರಿದರು.

ಸ್ಥಳೀಯ ಪ್ರಮುಖ ರಸ್ತೆ ಹಾಗೂ ವೃತ್ತಗಳ ಬೀದಿ ಬದಿಯಲ್ಲಿ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿದ್ದ ಬೀದಿ ಬದಿ ವ್ಯಾಪಾರಸ್ಥರನ್ನು ಏಕಾಏಕಿ ರೋಣ ರಸ್ತೆಯ ಎಪಿಎಂಸಿ ಎದುರಿನ ಬಯಲು ಜಾಗೆಗೆ ಸ್ಥಳಾಂತರಿಸಿದ್ದು ಖಂಡನಾರ್ಹ. ಪುರಸಭೆಯಿಂದ ಪಟ್ಟಣದಲ್ಲಿ ಬೀದಿ ಬದಿ ವ್ಯಾಪಾರ ನಡೆಸುತ್ತಿರುವ ನಮಗೆ ಗುರುತಿನ ಚೀಟಿ ನೀಡಿದ್ದೀರಿ ಹೊರತು ನಮ್ಮ ಹಿತ ಕಾಯುತ್ತಿಲ್ಲ. ಎಪಿಎಂಸಿ ಎದುರಿನ ಬಯಲು ಜಾಗೆಯಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳು ಸಹ ಇಲ್ಲದ ಪರಿಣಾಮ ತೊಂದರೆ ಅನುಭವಿಸುವಂತಾಗಿದೆ. ಮಳೆ ಹಾಗೂ ಸುಡು ಬಿಸಲಿನಲ್ಲಿ ಮಹಿಳೆಯರು, ವೃದ್ಧರು ವ್ಯಾಪಾರ ವಹಿವಾಟು ಮಾಡಬೇಕಾದ ದುಸ್ಥಿತಿ ನಿರ್ಮಾಣವಾಗಿದೆ.

ಹೀಗಾಗಿ, ಪಟ್ಟಣದ ಜೋಡು ರಸ್ತೆ ಸೇರಿ ಪ್ರಮುಖ ರಸ್ತೆ ಮತ್ತು ವೃತ್ತಗಳ ಅಕ್ಕಪಕ್ಕದಲ್ಲಿ ಹಿಂದಿನಂತೆ ವ್ಯಾಪಾರ, ವಹಿವಾಟಿಗೆ ಅವಕಾಶ ನೀಡಬೇಕು. ಸಾರ್ವಜನಿಕರಿಗೆ ಹಾಗೂ ಸಂಚಾರಕ್ಕೆ ತೊಂದ-ರೆ ಮಾಡುವ ವ್ಯಾಪಾರಿಗಳ ಮೇಲೆ ಕಾನೂನು ಕ್ರಮಕ್ಕೆ ಮುಂದಾಗಬೇಕು ಎಂದು ಮನವಿ ಮಾಡಿದರು.

ಬೀದಿ ಬದಿ ವ್ಯಾಪಾರಸ್ಥರು ನೀಡಿದ ಮನವಿ ಸ್ವೀಕರಿಸಿದ ಪುರಸಭೆ ಅಧ್ಯಕ್ಷ ಸುಭಾಸ ಮ್ಯಾಗೇರಿ, ಪಟ್ಟಣದಲ್ಲಿನ ಬೀದಿ ಬದಿ ವ್ಯಾಪಾರಸ್ಥರಿಗೆ ಆಗುತ್ತಿರುವ ತೊಂದರೆ ಕುರಿತು ಶಾಸಕ ಜಿ.ಎಸ್. ಪಾಟೀಲ ಹಾಗೂ ಸದಸ್ಯರೊಂದಿಗೆ ಚರ್ಚಿಸಲಾಗುವುದು ಎಂದರು.

ಈ ವೇಳೆ ಸಂಘಟನೆ ಜಿಲ್ಲಾಧ್ಯಕ್ಷ ಭಾಷೇಸಾಬ ಕರ್ನಾಚಿ, ಹುಲ್ಲಪ್ಪ ತಳವಾರ, ಮಂಜುಳಾ ಪಮ್ಮಾರ, ಮುತ್ತು ರಾಠೋಡ, ಕಾಶಪ್ಪ ಭಜಂತ್ರಿ, ಮಲ್ಲವ್ವ ರಾಠೋಡ, ಸತೀಶ ಜುಂಜಾ, ಲಲಿತಾ ಮಾಳೊತ್ತರ, ಲಕ್ಷ್ಮವ್ವ ವಡ್ಡರ, ಶಂಕ್ರರಪ್ಪ ರಾಠೋಡ, ಪರಶುರಾಮ ಬಡಿಗೇರ ಸೇರಿ ಇತರರು ಇದ್ದರು.

### ಶಿವಾನುಭವ ಕಾರ್ಯಕ್ರಮದಲ್ಲಿ ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ವಿಶ್ವವ್ಯಾಪಕತೆಯ ಭಾವನೆ ಮೂಡಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸರ್ವಧರ್ಮಗಳ ಸಮನ್ವಯದ ತಾಣವಾಗಿದೆ. ಇಲ್ಲಿ ಸರ್ವ ಧರ್ಮೀಯರು ಸೌಹಾರ್ದತೆಯಿಂದ ಬದುಕುತ್ತಿದ್ದಾರೆ. ನಮ್ಮ ನಮ್ಮ ಧರ್ಮದ ಬಗ್ಗೆ ಪರಿಪೂರ್ಣವಾಗಿ ತಿಳಿಯಬೇಕೆಂದರೆ ಭಾರತದಲ್ಲಿರುವ ಅನ್ಯ ಧರ್ಮಗಳ ಅಧ್ಯಯನವು ಬಹಳ ಅವಶ್ಯ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2711ನೆಯ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ನಮ್ಮ ಧರ್ಮದ ಬಗ್ಗೆ ಅಭಿಮಾನ ಮೂಡಬೇಕಾದರೆ ಬೇರೆ ಬೇರೆ ಧರ್ಮಗ್ರಂಥಗಳ ಅಧ್ಯಯನ ಮಾಡಬೇಕು. ಧರ್ಮಸಹಿಷ್ಣುತೆ ಬರೀ ಮಾತುಗಳಲ್ಲಿ ಸೀಮಿತವಾದರೆ ಸಾಲದು. ಧರ್ಮಸಹಿಷ್ಣುತೆ ಭಾವ ಮೂಡಬೇಕಾದರೆ, ಬೆಳೆಯಬೇಕಾದರೆ, ಬದುಕಬೇಕಾದರೆ ಪ್ರತಿಯೊಬ್ಬರು ಶಾಂತಿ, ಸಮಾನತೆ, ಸೌಹಾರ್ದತೆಯಿಂದ ನಡೆದುಕೊಳ್ಳಬೇಕು. ಇಸ್ಲಾಂ, ಕ್ರಿಸ್ತಿಯನ್, ಪಾರ್ಸಿ, ಜೈನ್, ಬೌದ್ಧ ಎಲ್ಲಾ ಧರ್ಮಗಳು ಸಾರುವ ಸಂದೇಶ ಒಂದೇ. ಧರ್ಮಗ್ರಂಥಗಳ ಅಧ್ಯಯನದಿಂದ ಸಂಕುಚಿತತೆ ನಾಶವಾಗಿ, ನಾವೆಲ್ಲರೂ ಒಂದು ಎಂಬ ವಿಶ್ವವ್ಯಾಪಕತೆಯ ಭಾವನೆ ಮೂಡುತ್ತದೆ ಎಂದರು.



ಇದೇ ಸಂದರ್ಭದಲ್ಲಿ ಗದಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರ್‌ಸಾಬ್ ಬಬರ್ಚಿಯವರನ್ನು, ರಾಜ್ಯಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿ ಪಡೆದ ರತ್ನಾಬಾಯಿ ಜಿ.ಬದಿ ಇವರುಗಳನ್ನು ಸನ್ಮಾನಿಸಲಾಯಿತು.

ವಚನ ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಪ್ರಶಾಂತ ಜಡಗೊಂಡ, ವಚನ ಚಿಂತನವನ್ನು ಮಂಜುನಾಥ ಅಸ್ಕಿಯವರು ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಶಿವಣ್ಣ ಯರಾಸಿಯವರು ಹಾಗೂ ಸಮಾಜ ಸೇವಕರಾದ ತಯ್ಯಬ ದಾದಾಸಾಹೇಬ್ ಕುನ್ನಿಬಾವಿ ವಹಿಸಿಕೊಂಡಿದ್ದರು. ಸಿದ್ರಾಮಯ್ಯ ಕಾಶಿಮಠ ಬಸವಣ್ಣನವರ ರೂಪಕದ ಏಕಪಾತ್ರಾಭಿನಯವನ್ನು ಮಾಡಿ ಎಲ್ಲರನ್ನು ರಂಜಿಸಿದರು. ಡಾ.ಉಮೇಶ ಪುರದ ಸ್ವಾಗತಿಸಿದರು. ಪ್ರೊ. ಶಿವಾನಂದ ಹೊಂಬಳ ಕಾರ್ಯಕ್ರಮ ನಿರೂಪಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಉಮೇಶ ಪುರದ, ವಿದ್ಯಾವತಿ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿ ಚೇರಮನ್ ಐ.ಬಿ. ಬೆನಕೊಪ್ಪ, ಶಿವಾನುಭವ ಸಮಿತಿ ಸಹಚೇರಮನ್ ಶಿವಾನಂದ ಹೊಂಬಳ ಉಪಸ್ಥಿತರಿದ್ದರು.

> ಉಪನ್ಯಾಸಕರಾಗಿ ಆಗಮಿಸಿದ ಗದಗ ಡಿ.ಜಿ.ಎಂ ಆಯುರ್ವೇದ ಕಾಲೇಜಿನ ಡಾ. ಎಂ.ಡಿ. ಸಮುದ್ರಿ ಸರ್ವ ಧರ್ಮ ಸಮನ್ವಯ ವಿಷಯವಾಗಿ ಮಾತನಾಡುತ್ತಾ, ಮಾನವ ಹಲವಾರು ಧರ್ಮಗಳ ಗೊಂದಲದಲ್ಲಿ ಇದ್ದಾನೆ. ನನ್ನ ಧರ್ಮವೇ ಶ್ರೇಷ್ಠ ಎಂಬ ಭಾವನೆಯಲ್ಲಿ ಇರದೆ, ಸರ್ವಧರ್ಮಗಳಲ್ಲಿ ಏಕತೆ ಕಾಣಬೇಕು. ಅನೇಕ ಮಹಾತ್ಮರು ಸಾರಿದ ಸಂದೇಶಗಳನ್ನು ಅರಿತು ನಡೆಯಬೇಕು ಎಂದು ಹೇಳಿದರಲ್ಲದೆ, ಮಹಮ್ಮದ ಪೈಗಂಬರ್ ಹಾಗೂ ಬಸವಣ್ಣನವರ ಸಂದೇಶಗಳನ್ನು ತುಲನಾತ್ಮಕವಾಗಿ ತಿಳಿಸಿಕೊಟ್ಟರು.

### ನರೇಗಾ ಯೋಜನೆಯಡಿ ವೈಯಕ್ತಿಕ ಕಾಮಗಾರಿಗಳ ವಿತರಣಾ ಮೇಳ

# ರೈತರು ಯೋಜನೆಯ ಸದುಪಯೋಗ ಪಡೆಯಿರಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ವೈಯಕ್ತಿಕ ಕಾಮಗಾರಿಗಳ ಸೌಲಭ್ಯಗಳ ಪ್ರತಿಯೊಬ್ಬರು ಪಡೆದುಕೊಳ್ಳಬೇಕು ಎಂದು ತಾಲೂಕು ಪಂಚಾಯಿತಿ ಐಇಸಿ ಸಂಯೋಜಕ ಮಂಜುನಾಥ ಹಳ್ಳದ ಹೇಳಿದರು.

ತಾಲೂಕಿನ ಲಕ್ಕಲಕಟ್ಟಿ ಗ್ರಾಮದಲ್ಲಿ ವೈಯಕ್ತಿಕ ಕಾಮಗಾರಿಗಳ ವಿತರಣಾ ಮೇಳ ಹಾಗೂ ಬೇಡಿಕೆ ಅಭಿಯಾನ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

ನರೇಗಾ ಯೋಜನೆಯಲ್ಲಿ ಸಮುದಾಯ ಕಾಮಗಾರಿಯ ಜೊತೆಗೆ ವೈಯಕ್ತಿಕ ಕಾಮಗಾರಿಗಳಾದ ತೋಟಗಾರಿಕೆ ಬೆಳೆಗಳಾದ ಪೇರಲ, ಹಿಪ್ಪುನೇರಳೆ, ಡ್ರ್ಯಾಗನ್, ಗುಲಾಬಿ, ಮಲ್ಲಿಗೆ, ಪಪ್ಪಾಯಿ, ನಿಂಬೆ, ಸೀತಾಫಲ, ಮಾವು, ಅಪ್ಪೋಟಾ, ಸೀಬೆ, ದಾಳಿಂಬೆ, ಬಾಳೆ, ತೆಂಗು, ದ್ರಾಕ್ಷಿ, ವೀಳೆದೆಲೆ, ನೆಲ್ಲಿ, ಹುಣಸೆ, ಕರಿಬೇವು, ನುಗ್ಗೆ, ಕೃಷಿ ಇಲಾಖೆಯಿಂದ ಕೃಷಿಹೊಂಡ, ರೈತರ ಹೊಲದಲ್ಲಿ ಇಂಗು ಗುಂಡಿ ನಿರ್ಮಾಣ, ಕೋಳಿ ಶೆಡ್, ಬಚ್ಚಲು ಗುಂಡಿ, ಕುರಿ, ಮೇಕೆ ಶೆಡ್ ಹಾಗೂ ರೇಷ್ಮೆ, ಅರಣ್ಯ ಸೇರಿದಂತೆ ಅನುಷ್ಠಾನ ಇಲಾಖೆಯಡಿ ಇತರೆ ಕಾಮಗಾರಿಗಳನ್ನು ಮಾಡಿಕೊಳ್ಳಲು ಅವಕಾಶವಿದೆ. ರೈತರು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.



ಪಿಡಿಒ ಅಶೋಕ ಕಂಬಿ ಮಾತನಾಡಿ, ನರೇಗಾ ಯೋಜನೆಯಡಿಯಲ್ಲಿ ವೈಯಕ್ತಿಕ ಕಾಮಗಾರಿಗಳನ್ನು ಮಾಡಿಕೊಳ್ಳಲು ಸಾಕಷ್ಟು ಸೌಲಭ್ಯಗಳು ಇವೆ. ವೈಯಕ್ತಿಕ ಕಾಮಗಾರಿ ಮಾಡಿಕೊಳ್ಳಲು ಒಬ್ಬ ರೈತರಿಗೆ 5 ಲಕ್ಷ ರೂ ವರೆಗೂ ನೆರವು ನೀಡಲಾಗುತ್ತದೆ. ತೋಟಗಾರಿಕೆ ಬೆಳೆಗಳ ಸೌಲಭ್ಯ ಪಡೆಯಲು ಕನಿಷ್ಠ 5 ಎಕರೆ ಒಳಗೆ ಜಮೀನು ಹೊಂದಿರಬೇಕು. ನೀರಾವರಿ ಇರಬೇಕು ಎಂದರು.

ಈ ವೇಳೆ ಲಕ್ಕಲಕಟ್ಟಿ ಗ್ರಾಪಂ ಕಾರ್ಯಾಲಯದ ನೋಟಿಸ್ ಬೋರ್ಡ್‌ಗೆ ನರೇಗಾ ಮಾಹಿತಿಯುಳ ಕರಪತ್ರ ಅಂಟಿಸಲಾಯಿತು. ಗ್ರಾಮದಲ್ಲಿ ಹಾಗೂ ತಾಂಡಾದಲ್ಲಿ ರೈತರು ಮಹಿಳೆಯರನ್ನು ಸೇರಿಸಿ ಸಭೆ ನಡೆಸಿ ವೈಯಕ್ತಿಕ ಕಾಮಗಾರಿಗಳ ಮಾಹಿತಿಯುಳ್ಳ ಕರಪತ್ರ ನೀಡಿ ಪ್ರಚಾರ ಮಾಡುವ ಮೂಲಕ ಬೇಡಿಕೆ ಸಂಗ್ರಹಿಸಲಾಯಿತು.

ಗ್ರಾಮ ಕಾಯಕ ಮಿತ್ರ ಸುಜಾತಾ ಮ್ಯಾಗೇರಿ, ತಾಂಡಾ ರೋಜಗಾರ ಮಿತ್ರ ಸಕ್ಕುಬಾಯಿ ರಾಠೋಡ, ಡಿಇಒ ಲಿಂಗರಾಜ ಹನಮಂತಪ್ಪ ಹಾಗೂ ಸಿಬ್ಬಂದಿಗಳು ರೈತರು ಮತ್ತು ಮಹಿಳೆಯರು ಭಾಗವಹಿಸಿದ್ದರು.

## ಹಿರಿಯ ಛಾಯಾಗ್ರಾಹಕ ಬಸವರಾಜ ಸ್ವಾಮಿ ಅವರಿಗೆ ಛಾಯಾ ಶ್ರೀ ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಗಂಗಾವತಿ ತಾಲೂಕಿನ ಮರಳಿ ಗ್ರಾಮದ ಹಿರಿಯ ಛಾಯಾಗ್ರಾಹಕರು ಆದ ಬಸವರಾಜ ಸ್ವಾಮಿಗೆ ರಾಜ್ಯ ಮಟ್ಟದ ಛಾಯಾ ಶ್ರೀ ಪ್ರಶಸ್ತಿ ಲಭಿಸಿದೆ.

ಕರ್ನಾಟಕದ ಛಾಯಾ ಚಿತ್ರಗ್ರಾಹಕರ ಸಂಘದಿಂದ ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿದ್ದ ಶತಮಾನೋತ್ಸವ ಕಾರ್ಯಕ್ರಮದಲ್ಲಿ "ಡಿಜಿ ಇಮೇಜ್ –2024 "ರ ಛಾಯಾ ಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಬಸವರಾಜ ಸ್ವಾಮಿ ಅವರು ಮರಳಿ ಗ್ರಾಮದವರಾಗಿದ್ದು, ಸುಮಾರು 30 ವರ್ಷಗಳಿಂದ ಖಾಸಗಿ ಶಾಲೆಯ ಶಿಕ್ಷಕ ವೃತ್ತಿಯೊಂದಿಗೆ ಮೊದಮೊದಲು ಹವ್ಯಾಸಿ ಛಾಯಾಗ್ರಾಹಕರಾಗಿ ಸೇವೆ ಸಲ್ಲಿಸುತ್ತಿದ್ದರು. ತದನಂತರ ಕಳೆದ 16 ವರ್ಷಗಳಿಂದ ಪೂರ್ಣ ಪ್ರಮಾಣದಲ್ಲಿ ಛಾಯಾಗ್ರಾಹಕ ವೃತ್ತಿಯಲ್ಲಿ ಸೇವೆ ಸಲ್ಲಿಸಿದ ಇವರು ಗಂಗಾವತಿ ತಾಲೂಕು ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಸರ್ಕಾರಿ ಕಾರ್ಯಕ್ರಮ, ಖಾಸಗಿ ಕಾರ್ಯಕ್ರಮ ಸೇರಿದಂತೆ ಇನ್ನಿತರ ಸಮಾರಂಭಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸುವ ಮೂಲಕ ಹೆಸರುವಾಸಿಯಾಗಿದ್ದಾರೆ.. ಈ ಕಾರಣಕ್ಕಾಗಿ ಇವರನ್ನು ಗುರುತಿಸಿದ ಗಂಗಾವತಿ ಛಾಯಾಗ್ರಾಹಕ ಸಂಘ ಇವರಿಗೆ ಪ್ರಶಸ್ತಿ ನೀಡಲು ಶಿಫಾರಸ್ಸು ಮಾಡಿ ಮನವಿ ಮಾಡಿತ್ತು. ಇದ್ರಿಂದ ಬೆಂಗಳೂರಿನ ನಡೆದ ಕಾರ್ಯಕ್ರಮದಲ್ಲಿ ಬಸವರಾಜ ಸ್ವಾಮಿ ಅವರಿಗೆ ಛಾಯಶ್ರೀ ಪ್ರಶಸ್ತಿ ದೊರೆತಿದೆ.

> ನನ್ನ ಸೇವೆಯನ್ನು ಗುರುತಿಸಿ ಪ್ರಶಸ್ತಿ ನೀಡಿದ್ದಕ್ಕೆ ನಾನು ಅಭಾರಿಯಾಗಿದ್ದೆನೆ.. ನನ್ನ ಈ ಪ್ರಶಸ್ತಿಯನ್ನು ನನ್ನ ಕುಟುಂಬಕ್ಕೆ ಹಾಗೂ ನನ್ನ ಛಾಯಾಗ್ರಾಹಕ ಬಳಕ್ಕೆ ಅರ್ಪಿಸುತ್ತಿದ್ದೇನೆ. ನನಗೆ ಪ್ರಶಸ್ತಿ ನೀಡಿದಕ್ಕೆ ಅನಂತ ಅನಂತ ಧನ್ಯವಾದಗಳು
>
> **– ಬಸವರಾಜ ಸ್ವಾಮಿ,**
> ಹಿರಿಯ ಛಾಯಾಗ್ರಾಹಕರು ,ಮರಳಿ.

### ಪ.ಪೂ ಕಾಲೇಜುಗಳ ಕನ್ನಡ ಭಾಷಾ ಉಪನ್ಯಾಸಕರಿಗಾಗಿ ಪುನಶ್ಚೇತನ ತರಬೇತಿ ಶಿಬಿರ

# ಫಲಿತಾಂಶ ಸುಧಾರಣೆ ಉಪನ್ಯಾಸಕರ ಗುರಿಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಬಾರಿ ಗದಗ ಜಿಲ್ಲೆಯ ಪಿಯುಸಿ ಫಲಿತಾಂಶ ಕ್ಷೀಣಿಸಿದ್ದರಿಂದ ಇಲ್ಲಿನ ಉಪನ್ಯಾಸಕರು ಆತಂಕ ಗೊಳ್ಳುವ ಅಗತ್ಯವಿಲ್ಲ. ಈ ಬಾರಿ ಸೋಲನ್ನು ಸವಾಲಾಗಿ ಸ್ವೀಕರಿಸಿ ಗದಗ ಜಿಲ್ಲೆಯ ಫಲಿತಾಂಶವನ್ನು ಒಂದಂಕಿಗೆ ತರುವ ನಿಟ್ಟಿನಲ್ಲಿ ಉಪನ್ಯಾಸಕರು ಗಮನ ಹರಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಸಿದ್ಧಲಿಂಗ ಬಂಡು ಮಸನಾಯ್ಕ ನುಡಿದರು.

ಅವರು ಇತ್ತೀಚೆಗೆ ನಗರದ ಮನೋರಮಾ ವಾಣಿಜ್ಯ ಪದವಿಪೂರ್ವ ಕಾಲೇಜಿನಲ್ಲಿ ಶಾಲಾ ಶಿಕ್ಷಣ (ಪದವಿಪೂರ್ವ) ಇಲಾಖೆ ಹಾಗೂ ಗದಗ ಜಿಲ್ಲಾ ಪದವಿಪೂರ್ವ ಕಾಲೇಜುಗಳ ಕನ್ನಡ ಉಪನ್ಯಾಸಕರ ವೇದಿಕೆ ಸಂಯುಕ್ತಾಶ್ರದಲ್ಲಿ ಜರುಗಿದ ಕನ್ನಡ ಭಾಷಾ ವಿಷಯದ ಉಪನ್ಯಾಸಕರ ಒಂದು ದಿನದ ಪುನಶ್ಚೇತನ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಕನ್ನಡ ಭಾಷಾ ಉಪನ್ಯಾಸಕರಿಗಾಗಿ ನಡೆದಿರುವ ಈ ಪುನಶ್ಚೇತನ ತರಬೇತಿ ಶಿಬಿರ ಜ್ಞಾನಿಗಳ–ವಾಗ್ಮಿಗಳ ಸಮಾಗಮವಾಗಿದೆ. ಉಪನ್ಯಾಸಕರು ಜೀವನದಲ್ಲಿ ಸದಾ ವಿದ್ಯಾರ್ಥಿಯಾಗಿರಬೇಕಿದ್ದು, ಆಧುನಿಕ ತಂತ್ರಜ್ಞಾನಕ್ಕೆ ತಕ್ಕಂತೆ ಬೋಧನಾ ಕೌಶಲವನ್ನು ನವೀಕರಣಗೊಳಿಸಿಕೊಳ್ಳಬೇಕು. ಸಾಮಾಜಿಕ ಜಾಲತಾಣಗಳ ಭರಾಟೆಯ ನಡುವೆ ವಿದ್ಯಾರ್ಥಿಗಳ ಮನಗೆಲ್ಲುವ ಸವಾಲು ಉಪನ್ಯಾಸಕರ ಎದುರಿಗೆ ಇದ್ದು, ಉಪನ್ಯಾಸಕರ ವ್ಯಕ್ತಿತ್ವ ಸಹ ಮಾದರಿಯಾಗಿರಬೇಕು ಎಂದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪ.ಪೂ ಕಾಲೇಜುಗಳ ಕನ್ನಡ ಉಪನ್ಯಾಸಕರ ವೇದಿಕೆ ಅಧ್ಯಕ್ಷರಾದ ಡಾ.ಅರ್ಜುನ ಗೊಳಸಂಗಿ ಮಾತನಾಡಿ, ಸಂಪನ್ಮೂಲ ವ್ಯಕ್ತಿಗಳಾದ ಡಾ.ತಿಮ್ಮರಾಜು ಹಾಗೂ ಎಸ್. ಎಚ್. ಸತ್ಯನಾರಾಯಣ ಅವರು ನಾಡಿನ ದಕ್ಷಿಣ ಭಾಗದಿಂದ ಕೇವಲ ನಮ್ಮ ಕರೆಗೆ ಓಗೊಟ್ಟು ಪುನಶ್ಚೇತನ ಕಾರ್ಯಕ್ರಮಕ್ಕೆ ಆಗಮಿಸಿದ್ದಾರೆ. ಕನ್ನಡ ಭಾಷೆಯಲ್ಲಿ ಒಬ್ಬನೇ ಒಬ್ಬ ವಿದ್ಯಾರ್ಥಿ ಅನುತ್ತೀರ್ಣನಾಗದಂತೆ ನಾವು ನೋಡಿಕೊಳ್ಳಬೇಕಿದ್ದು, ಈ ಬಾರಿಯ ಗದಗ ಜಿಲ್ಲೆಯ ಫಲಿತಾಂಶಕ್ಕೆ ಕನ್ನಡ ಉಪನ್ಯಾಸಕರು ಅವಿರತ ಶ್ರಮವಹಿಸಿ ಒಳ್ಳೆಯ ಕೊಡುಗೆ ನೀಡೋಣ ಎಂದರು.

ಚಾಮರಾಜನಗರದ ಆಲೂರಿನ ಸರ್ಕಾರಿ ಪ.ಪೂ ಕಾಲೇಜಿನ ಪ್ರಾಂಶುಪಾಲರಾದ ಡಾ.ತಿಮ್ಮರಾಜು, ಚಿಕ್ಕಮಗಳೂರು ಬಸವನಹಳ್ಳಿಯ ಕನ್ನಡ ಉಪನ್ಯಾಸಕರಾದ ಡಾ. ಎಚ್. ಎಸ್. ಸತ್ಯನಾರಾಯಣ ಹಾಗೂ ಡಾ.ಸಿದ್ಧರಾಮ ಖಾನಾಪುರ ಕನ್ನಡ ಉಪನ್ಯಾಸಕರಿಗಾಗಿ ಪುನಶ್ಚೇತನ ತರಬೇತಿ ನೀಡಿದರು.

ಕಳೆದ ಸಾಲಿನ ಪಿಯು ಪರೀಕ್ಷೆಯಲ್ಲಿ ಕನ್ನಡ ಭಾಷೆಯಲ್ಲಿ ನೂರಕ್ಕೆ ನೂರು ಅಂಕ ಪಡೆದ ವಿದ್ಯಾರ್ಥಿಗಳನ್ನು ಹಾಗೂ ನೂರಕ್ಕೆ ನೂರು ಫಲಿತಾಂಶ ನೀಡಿದ ಕಾಲೇಜುಗಳ ಕನ್ನಡ ಉಪನ್ಯಾಸಕರನ್ನು ಸನ್ಮಾನಿಸಲಾಯಿತು. ಕನ್ನಡ ಭಾಷೆಯಲ್ಲಿ ಉತ್ತೀರ್ಣವಾಗಲು ನೆರವಾಗುವಂಥ ಕೈಪಿಡಿಯನ್ನು ಬಿಡುಗಡೆ ಮಾಡಲಾಯಿತು.

ಮನೋರಮಾ ಕಾಲೇಜಿನ ಚೇರಮನ್ನರಾದ ನರಸಿಂಹ ಕುಡ್ತರಕರ, ಪ.ಪೂ ಕಾಲೇಜುಗಳ ಕನ್ನಡ ಉಪನ್ಯಾಸಕರ ವೇದಿಕೆ ಗೌರವಾಧ್ಯಕ್ಷರಾದ ಸತೀಶ್ ಪಾಶಿ ವೇದಿಕೆ ಮೇಲಿದ್ದರು. ಎಫ್.ಎಸ್. ಹುಡೇದ ನಿರೂಪಿಸಿದರೆ, ಎಸ್. ಎಚ್. ಮಲ್ಲಾಪೂರ ವಂದಿಸಿದರು.

> ಶಿಬಿರದ ಆಶಯದ ಕುರಿತು ಜಿಲ್ಲಾ ಪ.ಪೂ ಕಾಲೇಜುಗಳ ಪ್ರಾಚಾರ್ಯರ ಸಂಘದ ಅಧ್ಯಕ್ಷರಾದ ಎಂ.ಸಿ. ಕಟ್ಟಿಮನಿ ಮಾತನಾಡಿ, ಗದಗ ಜಿಲ್ಲೆಯ ಪಿಯು ಫಲಿತಾಂಶ ಸುಧಾರಣೆಗೆ ಇತ್ತೀಚೆಗೆ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಸುದೀರ್ಘ ಸಭೆ ನಡೆದಿದ್ದು, ಉಪನ್ಯಾಸಕರ ಸಲಹೆ–ಅಶೋತ್ತರಗಳ ವರದಿ ನೀಡಲಾಗಿದೆ. ಕನ್ನಡ ಭಾಷಾ ಉಪನ್ಯಾಸಕರು ಸೇರಿದಂತೆ ಗದುಗಿನ ಪಿಯು ಉಪನ್ಯಾಸಕರ ವೃಂದ ಸತತ ಪರಿಶ್ರಮದಿಂದ ಫಲಿತಾಂಶವನ್ನು ಉತ್ತಮಗೊಳಿಸೋಣ ಎಂದರು.

## ಸೆ. 27ರಂದು ತ್ರೈಮಾಸಿಕ ಕೆಡಿಪಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 27 ರಂದು ಅಪರಾಹ್ನ 12 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ತಿಳಿಸಿದ್ದಾರೆ.

## ಲೋಕ ಅದಾಲತ್: ಒಂದೇ ದಿನ ದಾಖಲೆಯ 35 ಲಕ್ಷ ಪ್ರಕರಣಗಳು ಇತ್ಯರ್ಥ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಇದೇ ಸೆಪ್ಟೆಂಬರ್ 14 ರಂದು ರಾಜ್ಯದಾದ್ಯಂತ ನಡೆದ ರಾಷ್ಟ್ರೀಯ ಮೆಗಾ ಲೋಕ ಅದಾಲತ್ ಒಂದೇ ದಿನದಲ್ಲಿ ಬರೋಬ್ಬರಿ 35.85 ಲಕ್ಷ ಪ್ರಕರಣಗಳನ್ನು ಇತ್ಯರ್ಥಪಡಿಸಿದೆ. ಇದರಲ್ಲಿ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇದ್ದ 2 ಲಕ್ಷ ಪ್ರಕರಣಗಳು ಮತ್ತು 33.84 ಲಕ್ಷ ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿವೆ. ಈ ಬಗ್ಗೆ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮಾಹಿತಿ ನೀಡಿದೆ.


**ಪುರಸಭೆ ಕಾರ್ಯಾಲಯ, ಗಜೇಂದ್ರಗಡ.**

ಕ್ರಸಂ:ಪುಸಗ/ಆ.ವಿ/ಎಸ್.ಎಫ್.ಸಿ/24.10/ಎಸ್.ಬಿ.ಎಂ ಟೆಂಡರ/ವಹಿ/2024-25 ದಿನಾಂಕ:21-09-2024

**ಅಲ್ಪಾವಧಿ ಟೆಂಡರ ಪ್ರಕಟಣೆ**

ಪಾರದರ್ಶಕ ನಿಯಮಾವಳಿ 1999 ಹಾಗೂ 2000 ಪ್ರಕಾರ ಸನ್ 2024-25 ನೇ ಸಾಲಿನ ಎಸ್.ಎಫ್.ಸಿ & ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ಹಾಗೂ ಸ್ವಚ್ಚ ಭಾರತ್ ಮಿಷಿನ್ 1 ರ ಯೋಜನೆಯಡಿಯಲ್ಲಿ ಈ ಕೆಳಕಂಡಂತೆ ಟೆಂಡರ ಕರೆಯಲಾಗಿದ್ದು.

| ಕ್ರ ಸಂ | ಕಾರ್ಯಕ್ರಮದ ವಿವರ | ಅಂದಾಜು ಮೊತ್ತ ಲಕ್ಷಗಳಲ್ಲಿ | ಇ.ಎಂ.ಡಿ | ಫಾರ್ಮ ಫೀ |
|---|---|---|---|---|
| 1 | ಪೌರಕಾರ್ಮಿಕ ಕಲ್ಯಾಣ ಯೋಜನೆಯಡಿ ಸ್ವಚ್ಚತೆ & ನೈರ್ಮಲ್ಯ ಕಾರ್ಯದಲ್ಲಿ ತೊಡಗಿರುವ ಖಾಯಂ/ಹೊರಗುತ್ತಿಗೆ ಪೌರಕಾರ್ಮಿಕರು /ಲೋಡರ್ಸ್, ಡ್ರೈವರ್, ಸಫಾಯಿ ಕರ್ಮಾಚಾರಿ, ಸ್ಕ್ಯಾವೆಂಜರ್‌ಗಳಿಗೆ ಸುರಕ್ಷಾ ಧರಿಸುಗಳನ್ನು ಪೂರೈಸುವುದು(ಸನ್ 2024-25 ನೇ ಸಾಲಿನ ಎಸ್.ಎಫ್.ಸಿ & ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆ) | 1.05 | 2625.00 | 1000+ ಜಿ.ಎಸ್.ಟಿ |
| 2 | ಸ್ವಚ್ಚ ಭಾರತ್ ಮಿಷಿನ್ 1 ರ ಯೋಜನೆಯಡಿಯಲ್ಲಿ ಅನುಮೋದಿತ ಡಿ.ಪಿ.ಆರ್‌ನಲ್ಲಿ ಘನ ತ್ಯಾಜ್ಯ ವಸ್ತು ನಿರ್ವಹಣಾ ಘಟಕದಲ್ಲಿ ಸಸಿ ನೆಡಲು (ಹಸರೀಕರಣ) | 1.87 | 4675.00 | 1000+ ಜಿ.ಎಸ್.ಟಿ |

ಅರ್ಹ ಪೂರೈಕೆದಾರರು/ಎನ್.ಜಿ.ಓಗಳು ತಮ್ಮ ದರವಾರುಗಳನ್ನು ನಿಗದಿತ ಅವಧಿಯಲ್ಲಿ ಸಲ್ಲಿಸತಕ್ಕದ್ದು ಅವಧಿ ಮೀರಿ ಬಂದ ದರವಾರುಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.(ರಜಾ ದಿನಗಳನ್ನು ಹೊರತುಪಡಿಸಿ)

ನಿರ್ಧಾರಿತ ದಿನಾಂಕಗಳು: **(1)** ಅರ್ಹ ಪೂರೈಕೆದಾರರು/ಎನ್.ಜಿ.ಓ ರವರು ಖಾಲಿ ಟೆಂಡರಗಳನ್ನು ಕೋರಿ ಅರ್ಜಿ ಸಲ್ಲಿಸುವ & ಖಾಲಿ ಟೆಂಡರ ಶೆಡ್ಯೂಲ್ ವಿತರಿಸುವ ದಿನಾಂಕ: **23-09-2024 ರಿಂದಾ ದಿನಾಂಕ: 01-10-2024, 4-00** ಘಂಟೆಯ ವರೆಗೆ. **(2)** ಭರಣಾ ಮಾಡಿದ ದರವಾರು ಲಕೋಟೆಗಳನ್ನು ದ್ವಿ-ಪ್ರತಿಯಲ್ಲಿ ಮೇಲೆ ಸುರಕ್ಷಾ ಪರಿಕರಗಳ ಹೆಸರು/ ಘನ ತ್ಯಾಜ್ಯ ವಸ್ತು ನಿರ್ವಹಣಾ ಘಟಕದಲ್ಲಿ ಸಸಿ ನೆಡಲು(ಹಸರೀಕರಣ) ಬರೆದು ಟೆಂಡರ ಪೆಟ್ಟಿಗೆಯಲ್ಲಿ ಹಾಕಲು ನಿಗಧಿಪಡಿಸಿದ ದಿನಾಂಕ:**01-10-2024 ಸಾಯಂಕಾಲ 4-00** ಗಂಟೆಯೊಳಗಾಗಿ ಪುರಸಭೆ ಕಾರ್ಯಾಲಯ ಗಜೇಂದ್ರಗಡ ಕಾರ್ಯಾಲಯದಲ್ಲಿ ಇಟ್ಟಂತಹ ಟೆಂಡರ ಪೆಟ್ಟಿಗೆಯಲ್ಲಿ ಟೆಂಡರ ಹಾಕತಕ್ಕದ್ದು. ಟೆಂಡರ ತೆರೆಯುವ ಗುತ್ತಿಗೆದಾರರ ಹಾಜರಾತಿಯಲ್ಲಿ ಅಂದೇ ಅಥವಾ ಮುಂದಿನ ಯಾವುದಾದರು ಕೆಲಸದ ಅವಧಿಯಲ್ಲಿ ಪುರಸಭೆ ಕಛೇರಿಯಲ್ಲಿ ತೆರೆಯಲಾಗುವುದು. **(3)** ಇಡಗಂಟು (ಇಎಂಡಿ) ತೇವಣಿ ಮೊತ್ತವನ್ನು ಮುಖ್ಯಾಧಿಕಾರಿ, ಪುರಸಭೆ ಗಜೇಂದ್ರಗಡ. ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕಿನಿಂದ ಗಜೇಂದ್ರಗಡದಲ್ಲಿ ನಗಧೀಕರಣಗೊಳ್ಳುವ ಡಿ.ಡಿ.ಯನ್ನು ಟೆಂಡರ ಜೊತೆಗೆ ಸಲ್ಲಿಸಬೇಕು. ಇಡಗಂಟು ತೇವಣಿಗೆ ಬಡ್ಡಿ ವಗ್ಯೆರೆ ಕೊಡಲಾಗುವುದಿಲ್ಲಾ.

**ಮುಖ್ಯಾಧಿಕಾರಿ** **ಅಧ್ಯಕ್ಷರು**
**ಪುರಸಭೆ ಗಜೇಂದ್ರಗಡ.** **ಪುರಸಭೆ ಗಜೇಂದ್ರಗಡ.**

ವಾ.ಸಾ.ಇ/ಗದಗ/233/ದೇಶಪಾಂಡೆಪಬ್ಲಿಸಿಟಿ/2024-25


# ತುಂಗಭದ್ರಾ ಜಲಾಶಯಕ್ಕೆ ಇಂದು ಸಿಎಂ ಬಾಗಿನ ಅರ್ಪಣೆ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ತುಂಗಭದ್ರಾ ಜಲಾಶಯವು ಭರ್ತಿಯಾಗಿರುವ ಹಿನ್ನೆಲೆಯಲ್ಲಿ ಸೆ.22ರಂದು ಬೆ.11.15ಕ್ಕೆ ಬಾಗಿನ ಸಮರ್ಪಣೆ ಕಾರ್ಯಕ್ರಮ ತುಂಗಭದ್ರಾ ಆಣೆಕಟ್ಟಿನಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ತುಂಗಭದ್ರಾ ಜಲಾಶಯಕ್ಕೆ ಬಾಗಿನ ಸಮರ್ಪಣೆ ಮಾಡುವರು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ವಿಜಯನಗರ ಮತ್ತು ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್, ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ, ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ ಶರಣಪ್ರಕಾಶ್ ಪಾಟೀಲ್, ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್. ಎಸ್.ಬೋಸರಾಜು, ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ವಿಧಾನಸಭಾ ಕ್ಷೇತ್ರ ಶಾಸಕ ದೊಡ್ಡನಗೌಡ ಹನುಮಗೌಡ ಪಾಟೀಲ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು, ಶಾಸಕ ಬಸವರಾಜ ರಾಯರಡ್ಡಿ, ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ, ಕಂಪ್ಲಿ ಶಾಸಕ ಜೆ.ಎನ್.ಗಣೇಶ, ಮಸ್ಕಿ ಶಾಸಕ ಆರ್.ಬಸನಗೌಡ ತುರುವಿಹಾಳ, ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್, ಕೊಪ್ಪಳ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಉಪಸ್ಥಿತಿ ಇರಲಿದ್ದಾರೆ.



ವಿಜಯನಗರ, ಬಳ್ಳಾರಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಭಾಗವಹಿಸಲಿದ್ದಾರೆ.



ಗದಗ ತಾಲೂಕಿನಾದ್ಯಂತ ಅನುಪಮ ಸೇವೆ ಸಲ್ಲಿಸುತ್ತಿರುವ ಬಸವರಾಜ ಮುಂಡರಗಿ ಇಂಜಿನಿಯರ್ ಅವರನ್ನು ತಾಲೂಕಿನ ಮಲ್ಲಸಮುದ್ರ ಗ್ರಾಮದಲ್ಲಿ ಜರುಗಿದ ಪೋಷಣ ಮಾಸಾಚರಣೆ, ವಿವಿಧ ಕಾಮಗಾರಿಗಳ ಭೂಮಿಪೂಜೆ ಕಾಯಕ್ರಮದಲ್ಲಿ ಗ್ರಾಮ ಪಂಚಾಯತ್ ಸದಸ್ಯರಾದ ಎಸ್. ಎಚ್. ರಾಮೇನಹಳ್ಳಿ, ರಾಘವೇಂದ್ರ ಹುಲಕೋಟಿ, ಪ್ರಕಾಶ ದೇಸಾಯಿ, ಅಲ್ತಾಫ್ ಕಾಗದಗಾರ, ಭೀಮಪ್ಪ ಪೂಜಾರ್, ಮುಖಂಡರುಗಳಾದ ಸಲೀಂ ಸಾಬ್ ದರ್ಗಾದ, ಅನ್ವರ್ ಭಾಷಾ ಅವರು ಸನ್ಮಾನಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka